MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 177 | ರವಿವಾರ: 27-04-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2-00

VOLUME: 04 | ISSUE: 177 | SUNDAY: 27-04-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

**ಯುವ ಸ್ಫೂರ್ತಿ**



"ಸ್ವತಂತ್ರವಾಗಿರಲು ಧೈರ್ಯ ಮಾಡಿ, ನಿಮ್ಮ ಆಲೋಚನೆ ನಡೆಸುವಷ್ಟು ದೂರ ಹೋಗಲು ಧೈರ್ಯ ಮಾಡಿ ಮತ್ತು ಅದನ್ನು ನಿಮ್ಮ ಜೀವನದಲ್ಲಿ ಕಾರ್ಯಗತಗೊಳಿಸಲು ಧೈರ್ಯ ಮಾಡಿ."
-ಸ್ವಾಮಿ ವಿವೇಕಾನಂದ

## 223 ಗ್ರಾಮ ಪಂಚಾಯಿತಿಗಳ 265 ಸದಸ್ಯ ಸ್ಥಾನಗಳ ಚುನಾವಣೆಗೆ ವೇಳಾಪಟ್ಟಿ ಪ್ರಕಟ

**ಬೆಂಗಳೂರು,ಏ.27–** ವಿವಿಧ ಕಾರಣಗಳಿಂದ ತೆರವಾಗಿರುವ 223 ಗ್ರಾಮ ಪಂಚಾಯಿತಿಗಳ 265 ಸದಸ್ಯ ಸ್ಥಾನಗಳಿಗೆ ರಾಜ್ಯ ಚುನಾವಣಾ ಆಯೋಗ ಉಪ ಚುನಾವಣಾ ವೇಳಾಪಟ್ಟಿ ಪ್ರಕಟಿಸಿದೆ.

ಸಂಬಂಧಪಟ್ಟ ಜಿಲ್ಲೆಯ ಚುನಾವಣಾಧಿಕಾರಿಗಳು ಮೇ 8 ರಂದು ಅಧಿಸೂಚನೆ ಹೊರಡಿಸಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಳ್ಳಲಿದೆ. ಮೇ 14 ನಾಮಪತ್ರ ಸಲ್ಲಿಸಲು ಕಡೆಯ ದಿನವಾಗಿದ್ದು, ಮೇ 15 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆಯನ್ನು ವಾಪಸ್ ಪಡೆಯಲು ಮೇ 17 ಕಡೆಯ ದಿನವಾಗಿದೆ. ಮತದಾನದ ಅವಶ್ಯವಿದ್ದರೆ ಮೇ 25 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆವರೆಗೆ ಮತದಾನ ನಡೆಸಲಾಗುತ್ತದೆ. ಮೇ 28 ರಂದು ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಬೆಳಿಗ್ಗೆ 8 ಗಂಟೆಯಿಂದ ಮತ ಎಣಿಕೆ ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟವಾಗಲಿದೆ.




ಉಪ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮೇ 8 ರಿಂದ ಮೇ 28ರವರೆಗೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಆಯೋಗ ಹೊರಡಿಸಿರುವ ಆದೇಶದಲ್ಲಿ ತಿಳಿಸಲಾಗಿದೆ.ರಾಜ್ಯದ ಬಹುತೇಕ ಎಲ್ಲಾ ಜಿಲ್ಲೆಗಳ 135 ತಾಲ್ಲೂಕುಗಳ 223 ಗ್ರಾಮ ಪಂಚಾಯಿತಿಗಳ 265 ಸದಸ್ಯ ಸ್ಥಾನಗಳಿಗೆ ಚುನಾವಣೆ ಘೋಷಣೆಯಾಗಿದೆ.

## ಆಶಾಪುರ ಶಾಲೆಯಲ್ಲಿ ಬೇಸಿಗೆ ಶಿಬಿರ ಆರಂಭ

ಯುವ ಮಾರ್ಗ ಸುದ್ದಿ

**ರಾಯಚೂರು.ಏ.27–** ಜಿಲ್ಲಾ ಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯ ಚೂರ ಹಾಗೂ ಅಭ್ಯುದಯ ಫೌಂಡೇಶನ್ ಮೈಸೂರ ಇವ ರ ಆಶ್ರಯದಲ್ಲಿ ಉನ್ನತೀಕರಿ

2ನೇ ಪುಟಕ್ಕೆ




## ಭಾರಿ ಬಿರುಗಾಳಿಗೆ ಕಿತ್ತು ಹೋದ ಶೆಡ್: ಅಪಾರ ಪ್ರಮಾಣದ ಹಾನಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಏ.27–** ಬಿರುಗಾಳಿ ಸಹಿತ ಭಾರಿ ಮಳೆಗೆ ಪಟ್ಟಣದ ಹೊರವಲಯದ ರಾಯಚೂರು ರಸ್ತೆಗೆ ಹೊಂದಿಕೊಂಡಿರುವ ಟಾಟಾ ಮೋಟರ್ಸ್ ಶೆಡ್ ಕಿತ್ತುಕೊಂಡು ಹೋಗಿರುವ ಘಟನೆ ಶುಕ್ರವಾರ ಸಂಜೆ ನಡೆದಿದೆ.ಶುಕ್ರವಾರ ಸಂಜೆ ನಾಲ್ಕು ಗಂಟೆಯಿಂದ ಆರಂಭವಾದ ಗುಡುಗು, ಸಿಡಿಲು ಸಹಿತ ಭಾರಿ ಬಿರುಗಾಳಿ ಮಳೆಯಿಂದಾಗಿ ಪಟ್ಟಣದ ಬಸವ ಎಂಡ್ ಬಸವ ಟಾಟಾ ಮೋಟರ್ಸ್ ಶೇಡ್‌ನ ಶೀಟ್‌ಗಳು ಹಾರಿ ಹೋಗಿವೆ. ಕೆಲವು ಕೆಳಗಡೆ ಬಿದ್ದಿದ್ದು, ಶೀಟ್ ಮತ್ತು ಕಬ್ಬಿಣದ ಯ್ಯಾಂಗಲರ್‌ಗಳು ಬಿದ್ದಿದ್ದರಿಂದ 1038 ಬಿಡಿಭಾಗಗಳು ಗಾಳಿಗೆ ಎಲ್ಲಿಂದರಲ್ಲಿ ಹಾರಿಹೋಗಿವೆ. ಸರ್ವಿಸ್ ಸೆಂಟರ್‌ನಲ್ಲಿದ್ದ ಬಿಲ್ಡಿಂಗ್ ಪ್ಯಾಂಟ್, ವೀಲ್ಡ್ ಅಲೈಮೆಂಟ್, ವೀಲ್ಸ್ ಬ್ಯಾನರ್, ಟಯರ್ ಚೆಂಜರ್, ಪೇಯಿಂಟ್ ಲೈನರ್‌ಗಳು ಹಾನಿಯಾಗಿದ್ದರಿಂದ ಒಟ್ಟು ಐದು ಕೋಟಿ ರೂಪಾಯಿ ಮೌಲ್ಯದ ನಷ್ಟವಾಗಿದೆ ಎಂದು ಮೋಟಾರ್‌ನ ಮಾಲೀಕ ಮಂಜುನಾಥ ಪಾಟೀಲ ತಿಳಿಸಿದ್ದಾರೆ.



### ಉಗ್ರವಾದಿಗಳ ದಾಳಿಗೆ ಖಂಡನೆ ಮತ್ತು ಶ್ರದ್ಧಾಂಜಲಿ

## ಸಾಲಿಡಾರಿಟಿ ಯೂತ್ ಮೊಮೆಂಟ್ ವತಿಯಿಂದ ಶಾಂತಿ ಪ್ರತಿಭಟನೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಏ.27–**ಕಾಶ್ಮೀರದ ಪಹ ಲ್ಗಾಮ್‌ನಲ್ಲಿ ನಡೆದ ಆತಂಕ ವಾದಿ ದಾಳಿಯನ್ನು ಖಂಡಿಸಿ ಪಟ್ಟಣದ ಬಸವ ವೃತ್ತದಲ್ಲಿ ಸಾಲಿಡಾರಿಟಿ ಯೂತ್ ಮೊ ಮೆಂಟ್ ಸಂಸ್ಥೆಯು ಶಾಂತಿ ಪ್ರತಿಭಟನೆ ಆಯೋಜಿಸಿತು.

ಈ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಪ್ರವಾಸಿಗರ ಸ್ಮರಣಾರ್ಥವಾಗಿ ಮೇಣದ ಬತ್ತಿಗಳ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಂಘದ ಸದ ಸ್ಯರು ಮತ್ತು ಸಾರ್ವಜನಿಕರು ದೀಪ ಬೆಳಗಿಸಿ, ಮೌನಾಚರಣೆ ಮೂಲಕ ತಮ್ಮ ದುಃಖವನ್ನು ವ್ಯಕ್ತಪಡಿಸಿದರು. ವೆಲ್ಫೇರ್ ಪಾರ್ಟಿಯ ಜಿಲ್ಲಾಧ್ಯಕ್ಷ ಶೇಕ್ ಫರೀದ್ ಉಮರಿ, ಮೌಲಾನ ಸಮೀರ್ ಪಾಷಾ, ಯುವ ಮುಖಂಡ ಮಿರ್ಜಾ ಮೊಹಮ್ಮದ್ ಬೇಗ್, ಅಬ್ದುಲ್ ಕರೀಂ ಖಾನ್, ಮೊಹಮ್ಮದ್ ಹಾರೂನ್ ಹಾಗೂ ದಾವುದು ಸಿದ್ದೀಕಿ ಮತ್ತು ಟಿಪ್ಪು ಸುಲ್ತಾನ್ ಸಂಘದ ಅಧ್ಯಕ್ಷ ಮಹಿಬೂಬ್ ಕುರೇಶಿ ಹಾಗೂ ಆದಿಲ್ ಸಿದ್ದಿಕಿ ಮಾತನಾಡಿ "ಈ ರೀತಿಯ ಕ್ರೂರ ಕೃತ್ಯಗಳು ದೇಶದ ಶಾಂತಿ, ಸಾಮರಸ್ಯತೆಗೆ ಧಕ್ಕೆಯಾಗಿದ್ದು, ಇಂತಹ ಘಟನೆಗಳನ್ನು ತೀವ್ರವಾಗಿ ಖಂಡಿಸುತ್ತೇವೆ" ಎಂದರು."ಪಹಲ್ಗಾಮ್‌ನಲ್ಲಿ ಭದ್ರತಾ ವ್ಯವಸ್ಥೆಯ ಬಹುತೇಕ ಲೋಪದ ಕಾರಣ ಈ ದುರ್ಘಟನೆ ಸಂಭವಿಸಿದೆ. ಇಂತಹ ಪ್ರವಾಸಿ ಪ್ರದೇಶಗಳಲ್ಲಿ ಕಠಿಣ ಭದ್ರತಾ ಕ್ರಮಗಳು ಕೈಗೊಳ್ಳಬೇಕಾಗಿತ್ತು. ಇದು ಕೇಂದ್ರ ಸರ್ಕಾರದ ನಿರ್ಲಕ್ಷ್ಯ ಮತ್ತು ಇಂಟಲಿಜೆನ್ಸ್ ವೈಫಲ್ಯದ ಸ್ಪಷ್ಟ ಉದಾಹರಣೆಯಾಗಿದ್ದು, ಇದರಿಂದ ಅನೇಕ ಅಮಾಯಕ ಜನರು




2ನೇ ಪುಟಕ್ಕೆ

## ಭಾರತ-ಪಾಕ್ ಗಡಿ ಉದ್ವಿಗ್ನ:ಗುಂಡಿನ ದಾಳಿ

**ನವದೆಹಲಿ,ಏ.27–**ಜಮ್ಮು -ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಂತರಭಾರತ ಉಗ್ರರ ಭೇಟೆ ಆರಂಭಿಸಿರುವ ಬೆನ್ನಲ್ಲೆ ಭಾರತ-ಪಾಕ್ ಗಡಿಯಲ್ಲೂ ಉದ್ವಿಗ್ನ ಪರಿಸ್ಥಿತಿ ಮುಂದುವರೆದಿದ್ದು, ಪಾಕ್ ಭಾರತ ಕೈಗೊಂಡಿರುವ ರಾಜತಾಂತ್ರಿಕ ಕ್ರಮಗಳಿಂದ ಹತಾಶವಾಗಿ ಗಡಿಯಲ್ಲಿ ಅಪ್ರಚೋದಿತ ಗುಂಡಿನ ದಾಳಿಯನ್ನು ನಿನ್ನೆಯಿಂದ ನಡೆಸಿದ್ದು, ಇಂದೂ ಸಹ ಪಾಕ್‌ನ ಅಪ್ರಚೋದಿತ ಗುಂಡಿನ ದಾಳಿ ಮುಂದುವರೆದಿದ್ದು, ಭಾರತದ ಸೇನಾ ಪಡೆ ಸಹ ಪಾಕ್‌ಗೆ ದಿಟ್ಟ ಎದಿರೇಟು ನೀಡಿದೆ. ಈ ಗುಂಡಿನ ಚಕಮಕಿಯಲ್ಲಿ ಯಾವುದೇ ಸಾವುನೋವುಗಳಾದ ವರದಿಯಾಗಿಲ್ಲ ಗಡಿಯಲ್ಲಿ ಉದ್ವಿಗ್ನ ಪರಿಸ್ಥಿತಿ ತಲೆದೋರಿದೆ. ಇದೆಲ್ಲದರ ಮಧ್ಯೆ 7 ಉಗ್ರರ ಮನೆಗಳನ್ನು ಸೇನಾಪಡೆ ಧ್ವಂಸಗೊಳಿಸಿದೆ.ಪೆಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಕುರಿತಂತೆ ಸೇನಾಪಡೆ 175 ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆಗೆ ಗುರಿಪಡಿಸಲಾಗಿದೆ. ಇವರುಗಳು ಉಗ್ರಗಾಮಿಗಳಿಗೆ ದಾಳಿ ನಡೆಸಲು ಸಹಕಾರ ನೀಡಿರಬಹುದು ಎಂಬ ಶಂಕೆ ಹಿನ್ನೆಲೆಯಲ್ಲಿ ಸೇನಾಪಡೆ ವಶಕ್ಕೆ ಪಡೆದು ವಿಚಾರಣೆ ನಡೆಸಿದೆ.ಭಾರತ - ಪಾಕ್ ಗಡಿಯಲ್ಲಿ ಗುಂಡಿನ ಮೊರೆತ ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಸರ್ಕಾರ ಸಂಪೂರ್ಣ ಅಲರ್ಟ್ ಆಗಿದ್ದು, ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಎಲ್ಲ ಸಿಬ್ಬಂದಿಗಳ ರಜೆ ರದ್ದು ಮಾಡಿ ವೈದ್ಯಕೀಯ ತುರ್ತು ಪರಿಸ್ಥಿತಿಗೆ ಸಿದ್ಧರಾಗಿರುವಂತೆ ಸೂಚನೆಯನ್ನು ನೀಡಿದೆ.ಜಮ್ಮು -ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಂತರ ಪಾಕಿಸ್ತಾನದ ಪ್ರಜೆಗಳು ದೇಶ ಬಿಟ್ಟು ತೊರೆಯಲು ನಾಳೆ ಅಂತಿಮ ಗಡುವು ವಿಧಿಸಿದ್ದು ಇದರ ಜೊತೆ ಗಡಿ, ಸಿಂಧು ನದಿ ನೀರು ಬಂದ್ ಸೇರಿದಂತೆ ಅನೇಕ ಬಿಗಿ ಕ್ರಮ ಕೈಗೊಂಡಿದ್ದು ಇದಕ್ಕೆ ಪ್ರತಿಯಾಗಿ ಪಾಕಿಸ್ತಾನವೂ ಭಾರತದ ವಿಮಾನಗಳಿಗೆ ವಾಯು ಪ್ರದೇಶ ನಿಷೇಧಿಸಿದೆ. ಇದೆಲ್ಲದರ ಪರಿಣಾಮ ಉಭಯ ದೇಶಗಳ ಗಡಿಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ.ಈಚೆಗೆ ಪೆಹಲ್ಗಾಮ್‌ನಲ್ಲಿ ದಾಳಿ ನಡೆಸಿದ ಕಾರಣ 26 ಉಗ್ರರು ದಾರುಣ ಸಾವಿಗೀಡಾಗಿದ್ದಾರೆ. ದಾಳಿ ಬೆನ್ನಲ್ಲೇ ಕೇಂದ್ರ ಸರ್ಕಾರ ಗಡಿಭಾಗ ಸೇರಿದಂತೆ ವಿವಿಧೆಡೆ ಕಟ್ಟೆಚ್ಚರ ಘೋಷಿಸಿದ್ದು ಭಯೋತ್ಪಾದಕರನ್ನು ಹತ್ತಿಕ್ಕಲು ಕಾರ್ಯಾಚರಣೆ ಚುರುಕುಗೊಳಿಸಿದೆಪೆಹಲ್ಗಾಮ್‌ನಲ್ಲಿ ಉಗ್ರರ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲು ಭಾರತ ಸನ್ನದ್ಧವಾಗಿದೆ.

2ನೇ ಪುಟಕ್ಕೆ

## ಮಳೆ, ಗಾಳಿಗೆ ಹಾರಿದ ಟಿನ್ ಶೀಟ್‌ಗಳು

ಯುವ ಮಾರ್ಗ ಸುದ್ದಿ

**ಅರಕೇರಾ,ಏ.27–** ತಾಲೂಕಿನ ಚಡಕಲಗುಡ್ಡ ಗ್ರಾಮದಲ್ಲಿ ಮಳೆ, ಗಾಳಿಗೆ ಮನೆಯ ಮೇಲಿನ ಟಿನ್ ಶೀಟ್‌ಗಳು ಹಾರಿ ಹೋಗಿರವ ಘಟನೆ ಜರುಗಿದೆ. ಇದರಿಂದ ಮನೆಯ ಮಾಲೀಕರಿಗೆ ಲಕ್ಷಾಂತರರೂ.ನಷ್ಟವಾಗಿದೆ. ಗ್ರಾಮದ ಹನುಮಂತದುರುಗಯ್ಯ ತಳವಾರ, ರೇಣುಕಮ್ಮ ಹುಚ್ಚಪ್ಪ ತಳವಾರ, ಆಂಜಿನಯ್ಯ ಹನುಮಯ್ಯ ತಳವಾರ ಅವರು ವಾಸವಿದ್ದ ಮನೆ ಹಾನಗೊಳಗಾಗಿವೆ. ಟಿನ್ ಶೀಟ್‌ಗಳು ಹಾರಿ ಮನೆ ಮುಂದೆ ನಲ್ಲಿಸಿದ್ದ ಬುಲೇರೋ ಪಿಕಪ್ ವಾಹನದಗ್ಲಾಸ್‌ಒಡೆದು ಹೋಗಿದೆ.ಮನೆಯಲ್ಲಿ ಸಂಗ್ರಹಿಸಿಟ್ಟಿದ್ದ ದವಸ, ಧಾನ್ಯ, ಅಡುಗೆ ಸಾಮಾಗ್ರಿ, ಟಿವಿ, ಕೂಲರ್, ಹಣ ಗಾಳಿ, ಮಳೆಗೆ ನಷ್ಟಕ್ಕೆ ಗುರಿಯಾ ಗಿದೆ. ಅದೃಷ್ಟವಶಾತ್‌ಯಾವುದೇ ಪ್ರಾಣ ಹಾನಿಯಾಗಿಲ್ಲ. ಕೂಲಿ ಮಾಡಿಜೀವನ ಸಾಗಿಸುತ್ತಿದ್ದಬಡರೈತ ಕುಟುಂಬಗಳು ಲಕ್ಷಾಂತರ ರೂಪಾಯಿ ನಷ್ಟಕ್ಕೆ ಗುರಿಯಾಗಿದ್ದು, ಸರ್ಕಾರದ ಪರಿಹಾರದ ಮೊರೆ ಹೋಗಿದ್ದಾರೆ. ರೈತ ಸಂಘದ ಪ್ರಧಾನ ಕಾರ್ಯದರ್ಶಿ ಹನುಮಗೌಡ ಅವರುಕಂದಾಯ ಅಧಿಕಾರಿಗಳಿಗೆ ಹಾನಿಯಾದ ಬಗ್ಗೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ದೌಡಾಯಿ ಸಿದ ಕಂದಾಯ ಅಧಿಕಾರಿಗಳು ಹಾನಿಯಾದ ಬಗ್ಗೆವರದಿ ಸಿದ್ಧಪಡಿಸಿತಾಲೂಕು ಆಡಳಿತಕ್ಕೆ ಸಲ್ಲಿಸಿದ್ದಾರೆ.





## ವಚನ ಮಾಂಗಲ್ಯ ಸರಳ ಮದುವೆಗೆ ಬಸವಾಭಿಮಾನಿಗಳು ಸಾಕ್ಷಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು.ಏ.27–** ಮದುವೆಯ ಆಡಂಬರ, ಡಿಜೆ, ಮೆರವಣಿಗೆ ಬಟ್ಟೆ ಆಯಾರಿ ಸೇರಿ ಮುಹೂರ್ತ, ಮಂತ್ರ ವಾದ್ಯಗಳ ಸಪ್ಪಳವಿಲ್ಲ. ಕೇವಲ ವಚನಗಳ ಗಾಯನ ಅಲೆಯಲ್ಲಿ ಶುಭ ಸಂದರ್ಭದಲ್ಲಿ ಬಸವತತ್ವದಂತೆ ನಡೆದ ಮದುವೆಗೆ ಅಪರೂಪದ ವಿದ್ಯಮಾನಕ್ಕೆ ಸಾಕ್ಷಿಯಾಯಿತು. ಪಟ್ಟಣದ ಅಮರಪ್ಪ ಕುಪ್ಪೇರಿ ಅವರು ತಮ್ಮ ಸುಪುತ್ರರ ಕಲ್ಯಾಣಮೊತ್ಸವವನ್ನು ಕರಡಕಲ್ ಶ್ರೀ ವಿಜಯ ಮಹಾಂತೇಶ್ವರ ಕಲ್ಯಾಣ ಮಂಟಪದಲ್ಲಿ ನೆರವೇರಿಸುವ ಮೂಲಕ ಬಸವತತ್ವಕ್ಕೆ ಮೆರಗು ನೀಡಿದರು. ರಮೇಶ ಜೊತೆ ದೇವದುರ್ಗ ಮೂಲದ ಭಾಗ್ಯಶ್ರೀ ಹಾಗು ಆದಪ್ಪ ಜೊತೆ ಲಕ್ಷ್ಮೀ ಅವರ ವಿವಾಹವು 'ವಚನ ಮಾಂಗಲ್ಯ'ವು ಸರಳವಾಗಿ ನಡೆಯಿತು. ಷಟ್ಥಲಧ್ವಜಾರೋಹಣವು ಬಸವತತ್ವ ಅಭಿಮಾನಿಗಳು, ಹಾಲುಮತ ಸಮಾಜ,ಬಸವ ಬಳಗ ಲಿಂಗಸುಗೂರು ಗುರುಹಿರಿಯರ ಮುಖಂಡರ ಸಮ್ಮುಖದಲ್ಲಿ ನಡೆಯಿತು.ಶರಣ ಗವಿಶ. ಸಸಿಮಠ, ಶರಣೆ ಅರ್ಚನ, ಗವಿಶ್ ಶಸಿಮಠ ಗುರುಬಸವ ಮಹಾಮನೆ ಕೊಪ್ಪಳ ,ಶರಣ ಮತ್ತಣ್ಣ ಬಿರಲದಿನ್ನಿ ,ಶರಣ ದೇವಪ್ಪ ಮೂದೆನೂರು ಕೊಪ್ಪಳ ಇವರುಗಳು ವಚನ ಪ್ರತಿಜ್ಞಾ ವಿಧಿ ಬೋಧಿಸಿದರು. ಬಸವಾದಿ ಶರಣರ ವಚನಗಳ ಪ್ರತಿಜ್ಞಾ ಪೂರ್ವಕವಾಗಿ ಬೋಧಿಸಿದರು.ವಚನ ಮಾಂಗಲ್ಯಕ್ಕೆ ತುಮಕೂರಿನ ಸಿದ್ದಗಂಗಾಮಠದ ವಿದ್ಯಾರ್ಥಿಗಳು ವಚನ ಗಾಯ

2ನೇ ಪುಟಕ್ಕೆ



ಯುವ ಮಾರ್ಗ



## ಮೊದಲನೇಯ ಪುಟದಿಂದ

# ಭಾರತ–ಪಾಕ್ ಗಡಿ ಉದ್ವಿಗ್ನ:ಗುಂಡಿನ ದಾಳಿ

**ಮೂರು ಕಾರ್ಯಾಚರಣೆಗೆ ಸೇನೆ ಮುಂದಾಗಿದೆ. ಹಿಂದೂಗಳ ಹತ್ಯಾಕಾಂಡ ಬಳಿಕವೂ ಪಾಕಿಸ್ತಾನ ತನ್ನ ನರಿ ಬುದ್ಧಿಯನ್ನು ಬಿಟ್ಟಿಲ್ಲ. ವಾಸ್ತವ ಗಡಿ ನಿಯಂತ್ರಣ ರೇಖೆಯ ಗಡಿಯಲ್ಲಿ ಪಾಕಿಸ್ತಾನ ಪ್ರಚೋದನೆ ಮಾಡಿದ್ದು, ಗಡಿಯಲ್ಲಿ ಗುಂಡಿನ ಮೊರೆತ ಕೇಳಿ ಬಂದಿದೆ.ಈ ಹಿನ್ನೆಲೆಯಲ್ಲಿ ಭಾರತ ಮತ್ತು ಪಾಕಿಸ್ತಾನದ ಗಡಿಯಲ್ಲಿ ಬಿಗುವಿನ ವಾತಾವರಣ ಸೃಷ್ಟಿಯಾಗಿರುವ ನಡುವೆ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಎಲ್ಲಾ ಸಿಬ್ಬಂದಿ ರಜೆ ರದ್ದುಗೊಳಿಸಲಾಗಿದೆ. ಎಲ್ಲಾ ವೈದ್ಯಕೀಯ ಸಿಬ್ಬಂದಿ ಎಚ್ಚರದಿಂದ ಇರುವಂತೆ ಸೂಚನೆ ನೀಡಲಾಗಿದೆ.ಗಡಿಯಲ್ಲಿ ಯಾವುದೇ ರೀತಿಯ ಪರಿಸ್ಥಿತಿ ಎದುರಿಸಲು ಭೂ ಸೇನೆ,ವಾಯು ಸೇನೆ ಮತ್ತು ನೌಕಾಪಡೆಗಳು ಸಜ್ಜುಗೊಂಡಿವೆ. ಪಾಕಿಸ್ತಾನ ಬಾಲ ಬಿಚ್ಚಿದರೆ ತಕ್ಷಣ ಪ್ರತಿಕ್ರಿಯೆ ನೀಡಲು ಸೇನಾ ಪಡೆಗಳು ಸಮರೋಪಾದಿಯಲ್ಲಿ ಸಜ್ಜುಗೊಂಡಿದೆ. ಸಮುದ್ರದಲ್ಲಿ ನೌಕಾಪಡೆಯ ಹಡಗಳನ್ನು ಎಲ್ಲಾ ರೀತಿಯಲ್ಲಿ ಸಜ್ಜುಗೊಳಿಸಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ ಪರಿಸ್ಥಿತಿಗೆ ಅನುಗುಣವಾಗಿ ತುರ್ತು ಚಿಕಿತ್ಸೆಗಳು ಮತ್ತು ಉಪಕರಣಗಳು ಸಿದ್ಧವಾಗಿದೆ. ತುರ್ತು ಸೇವೆಗಾಗಿ ಕಂಟ್ರೋಲ್ ರೂಮ್ ಸ್ಥಾಪನೆಗೆ ಸೂಚಿಸಲಾಗಿದೆ. ತುರ್ತು ಸೇವೆಗಾಗಿ 0191–2582355 ಹೆಲ್ಪ್‌ಲೈನ್ ನಂಬರ್ ಅನ್ನು ಬಿಡುಗಡೆ ಮಾಡಲಾಗಿದೆ.**

# ಆಶಾಪುರ ಶಾಲೆಯಲ್ಲಿ ಬೇಸಿಗೆ ಶಿಬಿರ ಆರಂಭ

ಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆಶಾಪೂರದಲ್ಲಿ 20 ದಿನಗಳ ಬೇಸಿಗೆ ಶಿಬಿರ ಇತ್ತೀಚೆಗೆ ಆರಂಭಗೊಂಡಿತು.

ಈ ಶಿಬಿರಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಮುದುಕಪ್ಪ ಹೆಚ್ ಅವರು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಶಿಬಿರದಲ್ಲಿ ಗಣಿತ, ಬೇಸಿಕ್ ಇಂಗ್ಲೀಷ್, ವಿಜ್ಞಾನ ವಿಷಯಗಳು ಹಾಗೂ ಪಠ್ಯೇತರ ಚಟುವಟಿಕೆಗಳಾದ, ಚಿತ್ರಕಲೆ, ಸಂಗೀತ, ಆರ್ಟ್ ಮತ್ತು ಕ್ರಾಫ್ಟ್ (ಕಲೆ ಮತ್ತು ಕರಕುಶಲ) ಇನ್ನಿತರ ಚಟುವಟಿಕೆಗಳನ್ನು ನಡೆಸಲಾಗುತ್ತದೆ. ಮಕ್ಕಳು ಬೇಸಿಗೆಯ ಸಮಯ ವ್ಯರ್ಥ ಮಾಡುವುದಕ್ಕಿಂತ ಇಂತಹ ಶಿಬಿರದಲ್ಲಿ ಭಾಗವಹಿಸಿ ನರಂತರ ಕಲಿಕಾ ಚಟುವಟಿಯಲ್ಲಿ ತೊಡಗಿಸಿಕೊಂಡು ಮುಂದಿನ ಭವಿಷ್ಯವನ್ನು ರೂಪಿಸಿಕೊಳ್ಳುವಂತೆ ಮಕ್ಕಳಿಗೆ ಸಲಹೆ ನೀಡಿದರು. ಹಾಗೂ ಎಲ್ಲಾ ಪಾಲಕರು ಮಕ್ಕಳಿಗೆ ಬೇಸಿಗೆ ಶಿಬಿರದಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಬೇಕೆಂದು ಮನವಿ ಮಾಡಿದರು.

ಸಮಾರಂಭದಲ್ಲಿ ಆಶಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಮಾತೆ ತನುಜಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಸಂಯೋಜಕರಾದ ಬಾವಸಲಿ, ಅಂಗನವಾಡಿ ಕಾರ್ಯಕರ್ತೆ ಖಮರ್ಜಾನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜೆಂಡರ್ ತಜ್ಞೆ ಗಿರಿಜವ್ವ, ವಿಜಯಲಕ್ಷ್ಮೀ ಹಾಗೂ ಶಿಬಿರದ ಶಿಕ್ಷಕಿಯರಾದ ಪದ್ಮಾ, ರಾಜೇಶ್ವರಿ ಹಾಗೂ ಮಕ್ಕಳು ಪಾಲಕರು ಭಾಗವಹಿಸಿದ್ದರು.

# ವಚನ ಮಾಂಗಲ್ಯ ಸರಳ ಮದುವೆಗೆ ಬಸವಾಭಿಮಾನಿಗಳು ಸಾಕ್ಷಿ

**ಮಾಡುವ ಮೂಲಕ ಮದುವೆಗೆ ಸಾಕ್ಷಿಯಾದರು.ರಮೇಶ್ ದಂಪತಿಗಳು ತಮ್ಮ ವಿವಾಹವನ್ನು ಸರಳ ಸಮಾರಂಭದ ಮೂಲಕ ಬಸಾವದಿ ಶರಣರ ಆಶಯದಂತೆ ಬಸವತತ್ವದ ನೆರಳಲ್ಲಿ ದಂಪತಿಗಳು ವಚನಗಳ ಸಾಕ್ಷಿಯಾಗಿ ಮೂಲಕ ವೈವಾಹಿಕ ಜೀವನಕ್ಕೆ ಕಾಲಿಡುವ ಮೂಲಕ ಎಲ್ಲರಿಗೂ ಮಾದರಿಯಾಗಿದ್ದಾರೆ' ಎಂದು ಶರಣ ಗವೀಶ್ ಸಸಿಮಠ, ಶರಣೆ ಅರ್ಚನಾ ಗವೀಶ್ ಸಸಿಮಠ ಹೇಳಿದರು.ಈ ಸಂದರ್ಭದಲ್ಲಿ ಕರಡಕಲ್ ಗ್ರಾಮದ ಮುಖಂಡರಾದ ನಗರ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಗಿರಿಮಲ್ಲಗೌಡ ಕರಡಕಲ್ ಹಾಗೂ ಬಸವಾಭಿಮಾನಿಗಳು, ಸಿದ್ದಗಾಂಗಮಠದ ವಿದ್ಯಾರ್ಥಿಗಳು, ಜೆಸ್ಕಾಂ ಸಿಬ್ಬಂದಿಗಳು ಗ್ರಾಮದ ಮುಂಖಡರು ಸೇರಿದಂತೆ ಇದ್ದರು.**

# ಸಾಲಿಡಾರಿಟಿ ಯೂತ್ ಮೊಮೆಂಟ್ ವತಿಯಿಂದ ಶಾಂತಿ ಪ್ರತಿಭಟನೆ

ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ," ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಾಲಿಡಾರಿಟಿ ಯೂತ್ ಮೊಮೆಂಟ್ ಅಧ್ಯಕ್ಷ ನಾಸಿರ್ ಅಲಿ ಉಪಾಧ್ಯಕ್ಷ ಇಮ್ರಾನ್ ಖಾನ್ ಕಾರ್ಯದರ್ಶಿ ಮೊಹಮ್ಮದ್ ಹಾರುನ್ ಗಫರ್ ಖಾನ್ ಮೊಹಮ್ಮದ್ ಮುಸಾ ಹಸೀಬ್ ಉರ್ ರಹೇಮನ್ ಮುಜೀಬ್ ಉರ್ ರೆಹಮಾನ್ ,ಜಮಾತ್ ಇಸ್ಲಾಮಿ ಹಿಂದ್ ಅಧ್ಯಕ್ಷರಾದ ಅಬ್ದುಲ್ ರಹೇಮನ್ ಸಾಬ್ , ಅಥರ್ ಪಾಷಾ ಮೊಹಮ್ಮದ್ ಹಫೀಜ್ ನಾಜಿರ್ ಅಬ್ದುಲ್ ಖಾಯ್ಯೊಮ್ ಮತ್ತು ಇತರೆ ಸದಸ್ಯರು ಮತ್ತು ಅಪಾರ ಸಂಖ್ಯೆಯ ಯುವಕರು ಉಪಸ್ಥಿತರಿದ್ದರು.

# ಎಟಿಎಂ ದರೋಡೆ: ಇಬ್ಬರು ಆರೋಪಿಗಳಿಗೆ ಗುಂಡೇಟು



**ಕಲಬುರಗಿ,ಏ.27:** ನಗರದ ಕಾಕಡೆ ಚೌಕ ಸಮೀಪದ ಎಟಿಎಂ ದರೋಡೆ ಮಾಡಿ ಪರಾರಿಯಾಗಿದ್ದ ಹರಿಯಾಣ ಮೂಲದ ಇಬ್ಬರನ್ನು ಪೊಲೀಸರು ಗುಂಡು ಹೊಡೆದು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ತಸ್ಲೀಂ ಮತ್ತು ಶರೀಫ್ ಬಂಧಿತರು. ಕಲಬುರಗಿ ಹೊರವಲಯದ ಬೇಲೂರ್ ಕ್ರಾಸ್ ಬಳಿ ಆರೋಪಿಗಳು ಇರುವ ಕುರಿತು ಮಾಹಿತಿ ಸಂಗ್ರಹಿಸಿದ್ದ ಸಬ್ ಅರ್ಬನ್ ಠಾಣೆಯ ಸಿಪಿಐ ಸಂತೋಷ್ ತಟ್ಟೆಪಲ್ಲಿ ಹಾಗೂ ಪಿ.ಎಸ್.ಐ ಬಸವರಾಜ ಆರೋಪಿಗಳನ್ನು ಶರಣಾಗುವಂತೆ ಸೂಚಿಸಿದಾಗ ಬದಲಿಗೆ ಇಬ್ಬರ ಮೇಲೂ ಆರೋಪಿಗಳು ಚಾಕುವಿನಿಂದ ಹಲ್ಲೆ ನಡೆಸಲು ಮುಂದಾಗಿದ್ದಾರೆ. ಹೀಗಾಗಿ ಸ್ವರಕ್ಷಣೆಯ ದೃಷ್ಟಿಯಿಂದ ಆರೋಪಿಗಳ ಮೇಲೆ ಗುಂಡು ಹಾರಿಸಲಾಗಿದೆ. ಅವರೊಂದಿಗೆ ಕಾರಿನಲ್ಲಿದ್ದ ಇತರ ಇಬ್ಬರನ್ನು ಸಹ ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಶರಣಪ್ಪ ಡಗೆ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯಾದ್ಯಂತ ಎಟಿಎಂ ದರೋಡೆಯನ್ನೇ ವೃತ್ತಿಯಾಗಿಸಿಕೊಂಡಿದ್ದ ಈ ಇಬ್ಬರೂ ಇತರ ಸಹಚರರೊಂದಿಗೆ ಏ.9ರಂದು ಗ್ಯಾಸ್ ಕಟರ್ ಬಳಸಿ ಮಧ್ಯರಾತ್ರಿ ಕಾಕಡೆ ಚೌಕ ಸಮೀಪದ ಎಸ್.ಬಿ.ಐ ಎಟಿಎಂ ದರೋಡೆ ನಡೆಸಿದ್ದರು

ಬೇಲೂರು ಕ್ರಾಸ್ ಬಳಿ ಆರೋಪಿಗಳ ಚಲನವಲನದ ಕುರಿತು ಮಾಹಿತಿ ಸಂಗ್ರಹಿಸಿದ ಪೊಲೀಸರು ಅವರನ್ನು ಬಂಧಿಸಲು ತೆರಳಿದ್ದ ವೇಳೆ ಚಾಕುವಿನಿಂದ ಪೊಲೀಸರ ಮೇಲೆ ಹಲ್ಲೆ ನಡೆಸಲು ಮುಂದಾಗಿದ್ದಾರೆ. ಈ ವೇಳೆ ಪಿ.ಎಸ್.ಐ ಬಸವರಾಜ ಹಾಗೂ ಮೂವರು ಪೇದೆಗಳು ಗಾಯಗೊಂಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ದರೋಡೆ ನಡೆಸುವ ವೇಳೆ ಎಟಿಎಂ ಮುಂಭಾಗದಿಂದ ಐ20 ಬಿಳಿಬಣ್ಣದ ಕಾರು ಹಾದು ಹೋಗಿದ್ದನ್ನು ಪೊಲೀಸರು ತನಿಖೆ ವೇಳೆ ಪತ್ತೆ ಹಚ್ಚಿದ್ದರು. ಈ ಸುಳಿವು ಆಧರಿಸಿ ಆರೋಪಿಗಳ ಬಂಧನಕ್ಕೆ ಜಾಲ ಬೀಸಲಾಗಿತ್ತು ಎಂದರು.

ಗಾಯಗೊಂಡಿರುವ ಆರೋಪಿಗಳಾದ ಶರೀಫ್ ಹಾಗೂ ತಸ್ಲೀಂನನ್ನು ಜಿಮ್ಸ್ ಟ್ರಾಮಾ ಕೇರ್ ಸೆಂಟರ್ ಗೆ ದಾಖಲಿಸಲಾಗಿದೆ. ಈ ಪೈಕಿ ತಸ್ಲೀಂ ವಿರುದ್ಧ ಬೇರೆ ಬೇರೆ ಠಾಣೆಗಳಲ್ಲಿ ಎಂಟು ಹಾಗೂ ಶರೀಫ್ ವಿರುದ್ಧ ಮೂರು ಪ್ರಕರಣಗಳು ದಾಖಲಾಗಿವೆ.

# ಸಿಡಿಲಿಗೆ ಹೊತ್ತಿ ಉರಿದ ಬೊಲೆರೋ

ಯುವ ಮಾರ್ಗ ಸುದ್ದಿ

**ಅರಕೇರಾ.ಏ.27–** ತಾಲೂಕಿನ ಗಾಣದಾಳ ಗ್ರಾಮದಲ್ಲಿ ಆಕಸ್ಮಿಕ ಸಿಡಿಲಿಗೆ ಬೊಲೆರೋ ವಾಹನ ಹೊತ್ತಿ ಉರಿದಿರುವ ಘಟನೆ ಶುಕ್ರವಾರ ಜರುಗಿದೆ.

ಸೋಮನವರಡಿ ಗ್ರಾಮದ ಹನುಮಂತ್ರಾಯ ಗಣಜಲಿ ಎಂಬುವವರಿಗೆ ಸೇರಿದ ಬೊಲೆರೋ ಆಗಿದ್ದು, ಭತ್ತದ ಹುಲ್ಲು ಸಂಗ್ರಹಿಸಲು ಜಮೀನಿನ ಪಕ್ಕದ ತೆಂಗಿನ ಮರದ ಕೆಳಗಡೆ ನಿಲ್ಲಿಸಿದ್ದ ವಾಹನ ಬೆಂಕಿಗೆ ಆಹುತಿಯಾಗಿದೆ. ತೆಂಗಿನ ಮರಕ್ಕೆ ಬಡಿದ ಸಿಡಿಲು, ಬೆಂಕಿ ಕಿಡಿ ಉದ್ಭವಿಸಿದೆ. ಅಲ್ಲಿಯೇ ಇದ್ದ ಭತ್ತದ ಹುಲ್ಲಿಗೆ ಕಿಡಿ ತಾಗಿದ್ದು, ಮರದ ಕೆಳಗಿದ್ದ ಲಕ್ಷಾಂತರ ಮೌಲ್ಯದ ಬೊಲೆರೋ ಸುಟ್ಟು ಕರಕಲಾಗಿದೆ. ಇದೇ



ಅರಕೇರಾ ತಾಲೂಕಿನ ಗಾಣದಾಳ ಗ್ರಾಮದಲ್ಲಿ ಆಕಸ್ಮಿಕ ಸಿಡಿಲಿಗೆ ಬೊಲೆರೋ ವಾಹನ ಹೊತ್ತಿ ಉರಿಯುತ್ತಿರುವ ದೃಶ್ಯ.

ವೇಳೆ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ನಾಲ್ವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ ಎಂದು ತಿಳಿದು ಬಂದಿದೆ. ಕಂದಾಯ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಪಡೆದು ತಾಲೂಕು ಆಡಳಿತಕ್ಕೆ ವರದಿ ಸಲ್ಲಿಸಿದ್ದಾರೆ. ಜಾಲಹಳ್ಳಿ ಠಾಣೆ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.

# ಬಳ್ಳಾರಿ ಭಾಗದ ರೈಲ್ವೇ ಅಭಿವೃದ್ಧಿಗೆ ಮನವಿ

**ಬಳ್ಳಾರಿ:ಏ,27–** ಈ ಭಾಗದಲ್ಲಿ ಓಡಾಡುತ್ತಿದ್ದ ಕೆಲ ರೈಲುಗಳನ್ನು ಬಂದ್ ಮಾಡಲಾಗಿದೆ ಅವನ್ನು ಪುನಃ ಆರಂಭಿಸಬೇಕು. ಒಂದೇ ಭಾರತ್ ಸೇರಿದಂತೆ ಹೊಸ ರೈಲುಗಳನ್ನು ಆರಂಭಿಸಬೇಕು. ನೆನೆಗುದಿಗೆ ಬಿದ್ದಿರುವ ಬಳ್ಳಾರಿ ರೈಲು ನಿಲ್ದಾಣದ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಹುಬ್ಬಳ್ಳಿ ರೈಲ್ವೇ ವಿಭಾಗದ ಬಳಕೆದಾರರ



ಸಲಹಾ ಸಮಿತಿಯ ಸದಸ್ಯರಾದ ಆರ್. ಗೋಪಾಲಕೃಷ್ಣ, ಸೊಂತ ಗಿರಿಧರ ಅವರು ಹೊಬ್ಬಳ್ಳಿಯಲ್ಲಿನ ವಿಭಾಗೀಯ ರೈಲ್ವೇ ಮ್ಯಾನೇಜರ್ ಬಿ.ಮೀನಾ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದಾರೆ.

ಸಧ್ಯದಲ್ಲೇ ಬಳ್ಳಾರಿಗೆ ಆಗಮಿಸಿ ರೈಲ್ವೇ ನಿಲ್ದಾಣದ ಅಭಿವೃದ್ಧಿ ಕಾಮಗಾರಿ ಪರಿಶೀಲನೆ ಮಾಡುವುದಾಗಿ ಹೇಳಿದ್ದಾರಂತೆ

# ರಾಜ್ಯ ಸರ್ಕಾರಿ ನೌಕರರ ದಿನಾಚರಣೆಗೆ ನಿರ್ಧಾರ



**ಯಾದಗಿರಿ ಏ.27:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಸಹಯೋಗದಲ್ಲಿ ನಗರದಲ್ಲಿ ಇದೇ ಏಪ್ರಿಲ್ 29 ರಂದು ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ವಿತರಣಾ ಸಮಾರಂಭದ ಹಮ್ಮಿಕೊಳ್ಳುವ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ಇದೇ ಏಪ್ರಿಲ್ 29 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಪದವಿ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಕಾರ್ಯಕ್ರಮ ಉದ್ಘಾಟಿಸುವರು. ಅದರಂತೆ ಶಿಷ್ಟಾಚಾರದಂತೆ ಇತರ ಅತಿಥಿ ಗಣ್ಯರನ್ನು ಆಹ್ವಾನಿಸಲು, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ.ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನಕ್ಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಕಾರ್ಯಕ್ರಮ ದಲ್ಲಿ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಈ ಕಾರ್ಯಕ್ರಮದಲ್ಲಿ ಹಾಜರಿರಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್, ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛತೆ ಸೇರಿದಂತೆ ಇನ್ನಿತರ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡಲು ಅವರು ಸೂಚಿಸಿದರು. ಎಲ್ಲ ಸಿದ್ಧತೆ ವ್ಯವಸ್ಥಿತವಾಗಿ ಮಾಡಲು ವೇದಿಕೆ,ಊಟೋಪಹಾರ ಹಾಗೂ ಸನ್ಮಾನಕ್ಕೆ ವಿವಿಧ ಅಧಿಕಾರಿಗಳನ್ನು ಒಳಗೊಂಡ ಸಮಿತಿ ರಚಿಸಲು ನಿರ್ಧರಿಸಲಾಯಿತು.

ಸಭೆಯಲ್ಲಿ ಡಿವೈಎಸ್ಪಿ ಅರುಣಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವೀರಣ್ಣಗೌಡ, ರಾಜ್ಯ ಸರ್ಕಾರಿ ನೌಕರರ ಸಂಘ,ಜಿಲ್ಲಾ ಘಟಕ, ಅಧ್ಯಕ್ಷ ರಾಯಪ್ಪ ಜಿ.ಹುಡೆದ, ಯುವ ಜನಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ,ಡಿಡಿಪಿಐ ಶ್ರೀ ಮುಧೋಳ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# 345 ಆರೋಪಿಗಳ ಬಂಧನ: 7 ಕೋಟಿ ರೂ. ಮೌಲ್ಯದ ವಸ್ತುಗಳು ವಶ

**ವಿಜಯಪುರ:ಏ.27:** ಕಳ್ಳತನ ಸೇರಿದಂತೆ ಮತ್ತಿತರ ಪ್ರಕರಣಕ್ಕೆ ಸಂಬಂಧಿಸಿದಂತೆ ವರ್ಷದಲ್ಲಿ 345 ಆರೋಪಿಗಳನ್ನು ಬಂಧಿಸಿ, 7,02,29, 764 ರೂ. ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿ, ವಸ್ತುಗಳ ಮಾಲೀಕರಿಗೆ ಮರಳ ನೀಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಹೇಳಿದರು.

ಶುಕ್ರವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಒಟ್ಟು 7,02,29,764 ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದು ವಾರಸುದಾರರಿಗೆ 3,46,08,100 ರೂ. ಮೌಲ್ಯದ ವಸ್ತುಗಳನ್ನು ಹಿಂದಿರುಗಿಸಲಾಗುತ್ತಿದೆ. ಬಾಕಿ ಉಳಿದ 3,56,21,664 ರೂ. ಮೌಲ್ಯದ ವಸ್ತುಗಳನ್ನು ನ್ಯಾಯಾಲಯದಿಂದ ಅನುಮತಿ ಆಧರಿಸಿ ವಾರಸುದಾರರಿಗೆ ನೀಡುವ ವ್ಯವಸ್ಥೆ ಮಾಡಲಿದೆ ಎಂದರು.

2024 ಹಾಗೂ 2025 ನೇ ವರ್ಷದ ಅವಧಿಯಲ್ಲಿ ಪೊಲೀಸ್ ಇಲಾಖೆ 225 ಪ್ರಕರಣಗಳನ್ನು ಪತ್ತೆ ಮಾಡಿದ್ದು, ಒಟ್ಟು 345 ಆರೋಪಿತರನ್ನು ದಸ್ತಗಿರಿ ಮಾಡಿ ಆರೋಪಿತರಿಂದ ಕೋಟ್ಯಂತರ ರೂ. ಮೌಲ್ಯದ ವಸ್ತುಗಳನ್ನು ಜಪ್ತು ಮಾಡಿಕೊಳ್ಳಲಾಗಿದೆ. ಬಂಗಾರ ಬೆಳ್ಳಿ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಒಟ್ಟು 92 ಪ್ರಕರಣಗಳಿಗೆ ಸಂಬಂಧಿಸಿದಂತೆ 152 ಆರೋಪಿಗಳನ್ನು ಬಂಧಿಸಿದ್ದು,



ಆರೋಪಿಗಳಿಂದ 2,39,85,110 ರೂ. ಮೌಲ್ಯದ 5145.02 ಗ್ರಾಂ ಬಂಗಾರ ಹಾಗೂ 1723 ಗ್ರಾಂ ಬೆಳ್ಳಿ ಆಭರಣಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ ಎಂದರು.

ದ್ವಿ– ಚಕ್ರ ವಾಹನ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ 73 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದ ಪೊಲೀಸ್ ಇಲಾಖೆ ಈ ತೆರನಾದ ಪ್ರಕರಣದಲ್ಲಿ 102 ಆರೋಪಿಗಳನ್ನು ಬಂಧಿಸಿದ್ದು, 1,06,72,000 ರೂ. ಮೌಲ್ಯದ 251 ವಿವಿಧ ಕಂಪನಿಯ ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿಕೊಂಡಿದೆ ಎಂದರು.

ವಿವಿಧ ಕಾರು ಕಳ್ಳತನ ಪ್ರಕರಣಗಳನ್ನು ಭೇದಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದು, ಈ ವರ್ಷದಲ್ಲಿ ಒಟ್ಟು 14 ಕಾರು ಕಳ್ಳತನ ಪ್ರಕರಣ ದಾಖಲಿಸಿಕೊಂಡಿದ್ದು, 1,32,41,000 ರೂ. ಮೌಲ್ಯದ 12 ಕಾರುಗಳನ್ನು ಜಪ್ತು ಮಾಡಿಕೊಳ್ಳಲಾಗಿದೆ. ಟಿಪ್ಪರ್ ಕಳ್ಳತನ ಪ್ರಕರಣವನ್ನು ಇಲಾಖೆ ಬೇಧಿಸಿದ್ದು 19 ಲಕ್ಷ ರೂ. ಮೌಲ್ಯದ ಎರಡು ಟಿಪ್ಪ???ಗಳನ್ನು ಜಪ್ತು ಮಾಡಲಾಗಿದ್ದು, ಐವರು ಆರೋಪಿಗಳನ್ನು ಬಂಧಿಸಿದ್ದಾರೆ ಎಂದರು.

ನಗದು ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ದಾಖಲಾಗಿದ್ದ 19 ಪ್ರಕರಣಗಳ ಪೈಕಿ 31 ಆರೋಪಿಗಳನ್ನು ಬಂಧಿಸಿ 1,91,89,404 ರೂ. ನಗದು ಹಣವನ್ನು ಇಲಾಖೆ ಜಪ್ತು ಮಾಡಿಕೊಂಡಿದೆ ಎಂದು ವಿವರಿಸಿದರು

# ನಟಿರನ್ಯಾ,ತರುಣ್‌ಗೆ ಜಾಮೀನಿಗೆ ಹೈಕೋರ್ಟ್ ನಕಾರ

**ಬೆಂಗಳೂರು: 27**–ದುಬೈನಿಂದ 17 ಕೋಟಿ ಮೌಲ್ಯದ 14 ಕೆಜಿ ಚಿನ್ನ ಕಳ್ಳಸಾಗಣೆ ಆರೋಪದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಅಧಿಕಾರಿಗಳಿಂದ ಬಂಧನದಲ್ಲಿರುವ ನಟಿ ರನ್ಯಾರಾವ್ ಹಾಗೂ ಎರಡನೇ ಆರೋಪಿ ತರುಣ್ ಕೊಂಡೂರು ರಾಜು ಅವರಿಗೆ ಜಾಮೀನು ನೀಡಲು ಹೈಕೋರ್ಟ್ ನಿರಾಕರಿಸಿದೆ.

ರನ್ಯಾ ರಾವ್ ಮತ್ತು ತರುಣ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ. ಆರೋಪಿಗಳ ಜಾಮೀನು ಅರ್ಜಿ ವಿಚಾರಣೆ ನಡೆಯುತ್ತಿರುವ ನಡುವೆ ಆರೋಪಿ ರನ್ಯಾ ವಿರುದ್ಧ ಕೇಂದ್ರೀಯ ಗುಪ್ತಚರ ಬ್ಯೂರೋ (ಸಿಇಐಬಿ) ವಿದೇಶಿ ವಿನಿಮಯ ನಿಯಂತ್ರಣ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆ ಕಾಯಿದೆ (ಕಾಫಿಪೋಸಾ) ಯಡಿ ಬಂಧನ ಆದೇಶ ಹೊರಡಿಸಿತ್ತು. ಅರ್ಜಿಯ ವಿಚಾರಣೆ ವೇಳೆ ರನ್ಯಾರಾವ್ ಪರ ವಕೀಲರು, ಅರ್ಜಿದಾರರನ್ನು ಬಂಧಿಸುವ ಸಂದರ್ಭದಲ್ಲಿ ಕಸ್ಟಮ್ಸ್ ಕಾಯಿದೆಯ ನಿಬಂಧನೆಗಳನ್ನು ಉಲ್ಲಂಘಿಸಲಾಗಿದೆ. ಬಂಧನವೇ ಅಕ್ರಮವಾಗಿದ್ದು ಜಾಮೀನು ಮಂಜೂರು ಮಾಡಬೇಕು ಎಂದು ಕೋರಿದರು.

ಅಲ್ಲದೆ, ಕಸ್ಟಮ್ಸ್ ಕಾಯಿದೆಯ ಪ್ರಕಾರ ವಿದೇಶದಿಂದ 1 ಕೋಟಿಗೂ ಹೆಚ್ಚು ಮೌಲ್ಯದ ವಸ್ತುಗಳನ್ನು ಅಕ್ರಮವಾಗಿ ತಂದಲ್ಲಿ ಅವುಗಳನ್ನು ವಶಕ್ಕೆ ಪಡೆಯುವ ಸಂದರ್ಭದಲ್ಲಿ ಗೆಜಿಟೆಡ್ ಅಧಿಕಾರಿ ಇಲ್ಲವೇ ಸ್ಥಳೀಯ ಮ್ಯಾಜಿಸ್ಟ್ರೇಟ್ ಸಮ್ಮುಖದಲ್ಲಿ ಆಗಬೇಕು ಎಂದು ಕಾನೂನಿನಲ್ಲಿದೆ. ಆದರೆ, ತನಿಖಾಧಿಕಾರಿಗಳು ವಶಕ್ಕೆ ಪಡೆದ ಬಳಿಕ ಒಂದು ದಿನದ ನಂತರ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಿದ್ದಾರೆ. ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಸಲ್ಲಿಸಿರುವ ದಾಖಲೆಗಳಲ್ಲಿ ಒಂದರಲ್ಲಿ ಸಹಿ ಮತ್ತು ಸೀಲ್ ಇದೆ. ಮತ್ತೊಂದರಲ್ಲಿ ಸಹಿ ಮಾತ್ರ ಇದೆ. ಸೀಲ್ ಬಳಸಲಾಗಿಲ್ಲ. ತನಿಖಾಧಿಕಾರಿ ನೇಹಾ ಅವರು ಗೆಜೆಟೆಡ್ ಅಧಿಕಾರಿಯಾಗಿದ್ದು ಸಾಕ್ಷಿಯೂ ಆಗಿ ಸಹಿ ಇದ್ದಾರೆ. ಇದು ನಿಯಮ ಬಾಹಿರ.

ಅರ್ಜಿದಾರರನ್ನು ಬಂಧಿಸುವುದಕ್ಕೂ ಮುನ್ನ ಅವರಿಗೆ ಅಥವಾ ಅವರ ಸಂಬಂಧಿಕರು ಇಲ್ಲವೇ ಸ್ನೇಹಿತರಿಗೆ ಬಂಧನಕ್ಕೆ ಕಾರಣವನ್ನು ಲಿಖಿತವಾಗಿ ನೀಡಬೇಕು ಎಂದು ಸುಪ್ರೀಂಕೋರ್ಟ್ ತಿಳಿಸಿದೆ. ಆದರೆ, ಈ ಪ್ರಕರಣದಲ್ಲಿ 2025ರ ಮಾರ್ಚ್ 3 ರಂದು ವಶಕ್ಕೆ ಪಡೆದು, ಮಾರ್ಚ್ 4ರಂದು ಅವರ ಪತಿಗೆ ದೂರವಾಣಿ ಕರೆ ಮಾಡಿ ಬಂಧನದ ಕುರಿತು ಮಾಹಿತಿ ನೀಡಿದ್ದಾರೆ. ಇದು ನಿಯಮಗಳಿಗೆ ವಿರುದ್ಧವಾಗಿದೆ ಎಂದು ಕೋರ್ಟ್‌ನಲ್ಲಿ ರನ್ಯಾ ರಾವ್ ಪರ ವಕೀಲರು ವಾದ ಮಂಡಿಸಿದ್ದರು.

ಅರ್ಜಿದಾರರ ವಿರುದ್ದದ ಆರೋಪಕ್ಕೆ ಈ ಹಿಂದೆ 3 ವರ್ಷಗಳ ಕಾಲದವರೆಗೆ ಮಾತ್ರ ಶಿಕ್ಷೆ ವಿಧಿಸಬಹುದಾಗಿತ್ತು. ಕಾಯಿದೆಗೆ ತಿದ್ದುಪಡಿ ಮಾಡಿದ್ದು, ಏಳು ವರ್ಷದವರೆಗೂ ವಿಸ್ತರಿಸಬಹುದಾಗಿದೆ ಎಂದು ಬದಲಾವಣೆ ಮಾಡಲಾಗಿದೆ. ಆದ್ದರಿಂದ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಜಾಮೀನು ಮಂಜೂರು ಮಾಡಬಹುದು. ಆದರೆ, ಮ್ಯಾಜಿಸ್ಟ್ರೇಟ್ ಮತ್ತು ಸೆಷನ್ಸ್ ನ್ಯಾಯಾಲಯ ಜಾಮೀನು ಅರ್ಜಿಯನ್ನು ತಿರಸ್ಕರಿಸಲಾಗಿದೆ. ಪ್ರಕರಣದಲ್ಲಿ ಜಾಮೀನು ಮಂಜೂರು ಮಾಡಬಹುದಾಗಿದೆ ಎಂದು ಚೌಟ ಪೀಠಕ್ಕೆ ತಿಳಿಸಿದ್ದರು.

ಅರ್ಜಿದಾರರ ವಾದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದ ಡಿಆರ್‌ಐ ಪರ ವಕೀಲರು, ರನ್ಯಾ ರಾವ್ ಅವರು ದುಬೈನಿಂದ ಚಿನ್ನವನ್ನು ಕಳ್ಳಸಾಗಣೆ ಮಾಡಿ ಮೂರನೇ ಆರೋಪಿಯಾದ ಸಾಹಿಲ್ ಜೈನ್ ಎಂಬುವರಿಗೆ ಹಸ್ತಾಂತರಿಸುತ್ತಿದ್ದರು. ಪ್ರಕರಣದಲ್ಲಿ ಎರಡನೇ ಆರೋಪಿ ರಾಜು ಅವರು ರನ್ಯಾರಾವ್ ಅವರಿಂದ ಚಿನ್ನವನ್ನು



ಕಳ್ಳಸಾಗಣೆ ಮಾಡಿ ಮೂರನೇ ಆರೋಪಿ ಸಾಹಿಲ್ ಜೈನ್‌ಗೆ ನೀಡಿದ್ದಾರೆ. ಇಡೀ ಪ್ರಕರಣದಲ್ಲಿ 100 ಕೆಜಿ ಚಿನ್ನವನ್ನು ಕಳ್ಳಸಾಗಣೆ ಮಾಡಿರುವ ಸಂಬಂಧ ಸಾಕ್ಷ್ಯಾಧಾರಗಳು ದೊರೆಯುತ್ತಿವೆ, ಪ್ರಕರಣ ಇನ್ನೂ ತನಿಖಾ ಹಂತದಲ್ಲಿದೆ. ಜತೆಗೆ ರನ್ಯಾ ರಾವ್ ಮತ್ತು ರಾಜು ಅವರನ್ನು ಹೆಚ್ಚಿನ ವಿಚಾರಣೆಗೆ ಕೋರಿ ವಿಚಾರಣಾ ನ್ಯಾಯಾಲಯಕ್ಕೆ ಮನವಿ ಮಾಡಲಾಗಿದೆ. ಇಬ್ಬರೂ ಆರೋಪಿಗಳು ಒಟ್ಟು 31 ಬಾರಿ ದುಬೈಗೆ ಪ್ರಯಾಣಿಸಿದ್ದರು, 25 ಬಾರಿ ಒಂದೇ ದಿನದಲ್ಲಿ ದುಬೈಗೆ ಹೋಗಿ ಮತ್ತೆ ಭಾರತಕ್ಕೆ ಹಿಂದಿರುಗಿದ್ದಾರೆ ಎಂದು ವಿವರಿಸಿದ್ದರು.

ರನ್ಯಾ ರಾವ್ ಅವರ ಬಂಧನಕ್ಕೆ ಸಂಬಂಧಿಸಿದಂತೆ ಅವರ ಪತಿಗೆ ಲಿಖಿತವಾಗಿ ವಿವರಿಸಲಾಗಿದೆ. ಪ್ರಸ್ತುತ ಚಿನ್ನಕಳ್ಳಸಾಗಣೆ ಸಂಬಂಧ ತನಿಖೆ ನಡೆಸುತ್ತಿದ್ದು, ರನ್ಯಾಗೆ ಪ್ರೋಟೋಕಾಲ್ ಅಧಿಕಾರವನ್ನು ಯಾವ ಆಧಾರದಲ್ಲಿ ಒದಗಿಸಲಾಗಿದೆ ಎಂಬುದಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಬೇಕಾಗಿದೆ. ಆದ್ದರಿಂದ ಈ ಹಂತದಲ್ಲಿ ಜಾಮೀನು ನೀಡಬಾರದು. ಜೊತೆಗೆ, ಅರ್ಜಿಯನ್ನು ವಜಾಗೊಳಿಸಬೇಕು ಎಂದು ಕೋರಿದ್ದರು.

# ಪಾಕ್ ಜೊತೆ ಕ್ರಿಕೆಟ್ ಸಂಬಂಧ ಬೇಡ– ಗಂಗೂಲಿ



**ನವದೆಹಲಿ,ಏ.27**– ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನದೊಂದಿಗಿನ ಕ್ರಿಕೆಟ್ ಸಂಬಂಧವನ್ನು ಸಂಪೂರ್ಣವಾಗಿ ಕಡಿದುಕೊಳ್ಳಬೇಕೆಂದು ಭಾರತೀಯ ಕ್ರಿಕೆಟ್ ತಂಡದ ಮಾಜಿ ನಾಯಕ ಮತ್ತು ಬಿಸಿಸಿಐ ಮಾಜಿ ಅಧ್ಯಕ್ಷ ಸೌರವ್ ಗಂಗೂಲಿ ಶುಕ್ರವಾರ ಕರೆ ನೀಡಿದ್ದಾರೆ. ಈ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ್ದರು. ಈ ಭಯೋತ್ಪಾದಕ ದಾಳಿಗಳಿಗೆ ಪ್ರತಿಕ್ರಿಯೆಯಾಗಿ ಬಲವಾದ ಕ್ರಮ ಕೈಗೊಳ್ಳುವ ತುರ್ತು ಅಗತ್ಯವನ್ನು ಸೌರವ್ ಗಂಗೂಲಿ ಒತ್ತಿ ಹೇಳಿದ್ದಾರೆ.ಪ್ರತಿ ವರ್ಷ ಇಂತಹ ಘಟನೆಗಳು ನಡೆಯುತ್ತಿರುವುದು ಗಂಭೀರ ವಿಷಯ ಭಯೋತ್ಪಾದನೆಯನ್ನು ಸಹಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ

ಕಳೆದ ಕೆಲವು ವರ್ಷಗಳಿಂದ ಭಾರತ ಮತ್ತು ಪಾಕಿಸ್ತಾನ ತಂಡಗಳು ಏಷ್ಯನ್ ಕ್ರಿಕೆಟ್ ಕೌನ್ಸಿಲ್ (ಎಸಿಸಿ) ಆಯೋಜಿಸುವ ಟಿ–20 ಮತ್ತು 50 ಓವರ್‌ಗಳ ವಿಶ್ವಕಪ್‌ಗಳು, ಐಸಿಸಿ ಚಾಂಪಿಯನ್ಸ್ ಟ್ರೋಫಿ ಮತ್ತು ಏಷ್ಯಾ ಕಪ್ ಸ್ಪರ್ಧೆಗಳಂತಹ ಐಸಿಸಿ ಸ್ಪರ್ಧೆಗಳಲ್ಲಿ ಮಾತ್ರ ಮುಖಾಮುಖಿಯಾಗುತ್ತಿವೆ. ಎರಡೂ ದೇಶಗಳ ನಡುವೆ ಯಾವುದೇ ಸರಣಿ ಇರಲಿಲ್ಲ. ಕ್ರಿಕೆಟ್‌ನಲ್ಲಿ ಅತಿ ದೊಡ್ಡ ಪೈಪೋಟಿಯಾಗಿದ್ದರೂ, 2012–13ರ ನಂತರ ಭಾರತ ಮತ್ತು ಪಾಕಿಸ್ತಾನ ಯಾವುದೇ ದ್ವಿಪಕ್ಷೀಯ ಸರಣಿಯಲ್ಲಿ ಪರಸ್ಪರ ಮುಖಾಮುಖಿಯಾಗಿಲ್ಲ ಎಂಬುದು ಗಮನಾರ್ಹ. ಎರಡೂ ದೇಶಗಳ ನಡುವಿನ ರಾಜಕೀಯ ಸಂಬಂಧಗಳು ಹದಗೆಟ್ಟಿರುವುದರಿಂದ 2008 ರಿಂದ ಭಾರತ ಪಾಕಿಸ್ತಾನ ಪ್ರವಾಸ ಮಾಡಿಲ್ಲ.

ಇತ್ತೀಚಿನ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಸಮಯದಲ್ಲಿ, ಭಾರತವು ಪಾಕಿಸ್ತಾನದಲ್ಲಿ ಆಡಲು ನಿರಾಕರಿಸಿ, ಹೈಬ್ರಿಡ್ ಮಾದರಿಯಲ್ಲಿ ಟೂರ್ನಮೆಂಟ್ ಆಡಿದೆ, ಭಾರತದ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸಲಾಯಿತು.

# ಗುಜರಾತ್‌ನಲ್ಲಿ ಸಾವಿರಕ್ಕೂ ಹೆಚ್ಚು ಪಾಕ್–ಬಾಂಗ್ಲಾ ಅಕ್ರಮ ವಲಸಿಗರ ಬಂಧನ

**ಸೂರತ್, ಏ.27**– ಅಕ್ರಮ ಪಾಕ್ ವಲಸಿಗರ ಜೊತೆಗೆ ಬಾಂಗ್ಲಾದೇಶ ಅಕ್ರಮ ವಲಸೆಗಾರರನ್ನು ಬಂಧಿಸುವ ಕಾರ್ಯವನ್ನು ಗುಜರಾತ್ ಕೈಗೆತ್ತಿಕೊಂಡಿದೆ.ಇದುವರೆಗೂ ಸಾವಿರಕ್ಕೂ ಹೆಚ್ಚು ಅಕ್ರಮ ವಲಸಿಗರನ್ನು ಅಹಮದಾಬಾದ್ ಮತ್ತು ಸೂರತ್‌ನಲ್ಲಿ ಬಂಧಿಸಲಾಗಿದೆ.ಇದೀಗ ಪೊಲೀಸರು ವಿಚಾರಣೆ ನಡೆಸುತ್ತಿದ್ದು, ಎಲ್ಲ ಪ್ರಕ್ರಿಯೆಗಳು ನಡೆದ ನಂತರ ಅವನ್ನು ಗಡಿಪಾರು ಮಾಡುವುದಾಗಿ ಗುಜರಾತ್ ಪೊಲೀಸರು ಹೇಳಿದ್ದಾರೆ. ವಿಶೇಷ ಕಾರ್ಯಾಚರಣೆ ಗುಂಪು, ಅಪರಾಧ ಶಾಖೆ, ಮಾನವ ಕಳ್ಳಸಾಗಣೆ ವಿರೋಧಿ ಘಟಕ, ಅಪರಾಧ ಶಾಖೆ ತಡೆ ಮತ್ತು ಸ್ಥಳೀಯ ಪೊಲೀಸ್ ತಂಡಗಳು ಸೇರಿದಂತೆ ಅನೇಕ ಘಟಕಗಳು ಹಾಗೂ ಇಲಾಖೆಗಳು ಈ ಕಾರ್ಯಾಚರಣೆಗಳನ್ನು ನಡೆಸಿವೆ.

ಬಂಧನವಾಗಿರುವ ಎಲ್ಲ ಪ್ರಜೆಗಳು ಯಾವುದೇ ಪ್ರಮುಖ ದಾಖಲೆಗಳು ಇಲ್ಲದೆ ವಾಸಿಸುತ್ತಿದ್ದಾರೆ ಎಂದು ಹೇಳಲಾಗಿದೆ. ಇದರ ಜತೆಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಭಾರತದಲ್ಲಿ ವಾಸವಾಗಿದ್ದಾರೆ ಎಂದು ಹೇಳಲಾಗಿದೆ.ಸೂರತ್‌ನಲ್ಲಿ ಸ್ಥಳೀಯ ಪೊಲೀಸರು ಜಂಟಿಯಾಗಿ ರಾತ್ರಿ ಹೊತ್ತಿನಲ್ಲಿ ನಡೆಸಿದ ಕೂಂಬಿಂಗ್ ಕಾರ್ಯಾಚರಣೆಯಲ್ಲಿ 100 ಕ್ಕೂ ಹೆಚ್ಚು ಬಾಂಗ್ಲಾದೇಶಿ ಪ್ರಜೆಗಳನ್ನು ಬಂಧಿಸಲಾಗಿದೆ. ಅವರು ಅಕ್ರಮವಾಗಿ ಭಾರತಕ್ಕೆ ಪ್ರವೇಶಿಸಿ ನಕಲಿ ದಾಖಲೆಗಳೊಂದಿಗೆ ಸೂರತ್‌ನಲ್ಲಿ ವಾಸಿಸುತ್ತಿದ್ದರು. ತನಿಖೆಯ ನಂತರ ಅವರನ್ನು ಬಾಂಗ್ಲಾದೇಶಕ್ಕೆ ಗಡೀಪಾರು ಮಾಡಲಾಗುತ್ತದೆ ಎಂದು ಉಪ ಪೊಲೀಸ್? ಆಯುಕ್ತ ರಾಜ್‌ದೀಪ್? ಸಿಂಗ್ ನಕುಮ್ ಹೇಳಿದರು. ಇಂದು ಬೆಳಗಿನ ಜಾವ 3 ಗಂಟೆ ಸುಮಾರಿಗೆ ಅಹಮದಾಬಾದ್‌ನಲ್ಲಿ ಏಕಕಾಲದಲ್ಲಿ ಕಾರ್ಯಾಚರಣೆ ನಡೆಸಲಾಯಿತು., ಆರ್ಥಿಕ ಅಪರಾಧಗಳ ವಿಭಾಗ , ವಲಯ 6 ಮತ್ತು ಪ್ರಧಾನ ಕಚೇರಿಯ ತಂಡಗಳು ಅಕ್ರಮ ವಲಸಿಗರೆಂದು ಶಂಕಿಸಲಾಗಿರುವ 450 ಕ್ಕೂ ಹೆಚ್ಚು ವ್ಯಕ್ತಿಗಳನ್ನು ಬಂಧಿಸಿವೆ.

ಅಕ್ರಮ ವಲಸಿಗರನ್ನು ಬಂಧಿಸಬೇಕು ಎಂದು ಗೃಹ ಸಚಿವ, ಸಿಪಿ ಮತ್ತು ಡಿಜಿಪಿ ನಮಗೆ ನಿರ್ದೇಶನ ನೀಡಿದ್ದರು. ಏಪ್ರಿಲ್ 2024 ರಿಂದ ಇಲ್ಲಿಯವರೆಗೆ ಅಪರಾಧ ವಿಭಾಗವು ಎರಡು ಎಫ್‌ಐಆರ್‌ಗಳನ್ನು ದಾಖಲಿಸಿದೆ. 127 ಅಕ್ರಮ ಬಾಂಗ್ಲಾದೇಶಿಗಳನ್ನು ಬಂಧಿಸಲಾಗಿದೆ ಮತ್ತು 77 ಜನರನ್ನು ಗಡೀಪಾರು ಮಾಡಲಾಗಿದೆ ಎಂದು ಹೇಳಿದ್ದಾರೆ.

# ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಖಾದಿಸಿದ ವಿಶ್ವಸಂಸ್ಥೆ

**ನವದೆಹಲಿ, ಏ.27**– ಜಮ್ಮು ಮತ್ತು ಕಾಶ್ಮಿರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಬಲವಾಗಿ ಖಂಡಿಸಿದ್ದು, ಈ ಖಂಡನೀಯ ಭಯೋತ್ಪಾದಕ ಕೃತ್ಯದ ದುಷ್ಕರ್ಮಿಗಳು, ಸಂಘಟಕರು ಮತ್ತು ಪ್ರಾಯೋಜಕರನ್ನು ಹೊಣೆಗಾರರನ್ನಾಗಿ ಮಾಡುವ ಮತ್ತು ಅವರನ್ನು ನ್ಯಾಯದ ಮುಂದೆ ತರುವ ಅಗತ್ಯವನ್ನು ಒತ್ತಿಹೇಳಿದೆ.

15 ರಾಷ್ಟ್ರಗಳ ವಿಶ್ವಸಂಸ್ಥೆಯ ಭದ್ರತಾ ಮಂಡಳಿ (ಯುಎನ್ ಎಸ್ಸಿ) ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡಿದೆ, ಅದರಲ್ಲಿ ಭಯೋತ್ಪಾದನೆಯು ಅದರ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ಅಂತರ ರಾಷ್ಟ್ರೀಯ ಶಾಂತಿ ಮತ್ತು ಭದ್ರತೆಗೆ ಅತ್ಯಂತ ಗಂಭೀರ ಬೆದರಿಕೆಗಳಲ್ಲಿ ಒಂದಾಗಿದೆ ಎಂದು ಪುನರು ಚ್ಚರಿಸಿದೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮಿರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಭದ್ರತಾ ಮಂಡಳಿಯ ಸದಸ್ಯರು ಬಲವಾಗಿ ಖಂಡಿಸಿದರು, ಈ ಸಂದರ್ಭ ದಲ್ಲಿ ಕನಿಷ್ಠ 26 ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯ ಗೊಂಡಿದ್ದಾರೆ ಎಂದು ಅದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದೆ.



ಪತ್ರಿಕಾ ಹೇಳಿಕೆಯು ಎಲ್ಲಾ 15 ಸದಸ್ಯರ ಪರವಾಗಿ ಯುಎನ್ ಎಸ್ಸಿ ಅಧ್ಯಕ್ಷರು ಮಾಧ್ಯ ಮಗಳಿಗೆ ಮಾಡಿದ ಘೋಷ ಣೆಯಾಗಿದೆ. ಪಾಕಿ ಸ್ತಾನವು ಪ್ರಸ್ತುತ ಯುಎನ್ ಎಸ್ಸಿಯಲ್ಲಿ ಶಾಶ್ವತವಲ್ಲದ ಸದಸ್ಯ ರಾಷ್ಟ್ರವಾ ಗಿ ಕುಳಿತಿದೆ.ಯುಎನ್‌ಎಸ್ಸಿ ಸದಸ್ಯರು ಕುಟುಂಬಗಳಿಗೆ ತಮ್ಮ ಆಳವಾದ ಸಹಾನುಭೂತಿ ಮತ್ತು ಸಂತಾಪವನ್ನು ವ್ಯಕ್ತಪಡಿಸಿದರು. ಈ ಖಂಡನೀಯ ಭಯೋತ್ಪಾದಕ ಕೃತ್ಯದ ದುಷ್ಕರ್ಮಿಗಳು, ಸಂಘಟಕರು, ಹಣಕಾಸುದಾರರು ಮತ್ತು ಪ್ರಾಯೋಜಕರನ್ನು ಹೊಣೆಗಾರರನ್ನಾಗಿ ಮಾಡುವ ಮತ್ತು ಅವರನ್ನು ನ್ಯಾಯದ ಮುಂದೆ ತರುವ ಅಗತ್ಯವನ್ನು ಅವರು ಒತ್ತಿಹೇಳಿದರು. ಹತ್ಯೆಗಳಿಗೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂದು ಯುಎನ್‌ಎಸ್ಸಿ ಒತ್ತಿಹೇಳಿತು ಮತ್ತು ಅಂತರರಾಷ್ಟ್ರೀಯ ಕಾನೂನು ಮತ್ತು ಸಂಬಂಧಿತ ಭದ್ರತಾ ಮಂಡಳಿಯ ನಿರ್ಣಯಗಳ ಅಡಿಯಲ್ಲಿ ತಮ್ಮ ಬಾಧ್ಯತೆಗಳಿಗೆ ಅನುಗುಣವಾಗಿ, ಈ ನಿಟ್ಟಿನಲ್ಲಿ ಎಲ್ಲಾ ಸಂಬಂಧಿತ ಅಧಿಕಾರಿಗಳೊಂದಿಗೆ ಸಕ್ರಿಯವಾಗಿ ಸಹಕರಿಸುವಂತೆ ಎಲ್ಲಾ ದೇಶಗಳನ್ನು ಒತ್ತಾಯಿಸಿತು.

ಭಯೋತ್ಪಾದನೆಯ ಯಾವುದೇ ಕೃತ್ಯಗಳು ಅಪರಾಧ ಮತ್ತು ನ್ಯಾಯಸಮ್ಮತವಲ್ಲ ಎಂದು ಸದಸ್ಯರು ಪುನರುಚ್ಚರಿಸಿದರು, ಅವುಗಳ ಪ್ರೇರಣೆ, ಎಲ್ಲಿ, ಯಾವಾಗ ಮತ್ತು ಯಾರಿಂದ ಮಾಡಲ್ಪಟ್ಟಿದೆ ಎಂಬುದನ್ನು ಲೆಕ್ಕಿಸದೆ. ವಿಶ್ವಸಂಸ್ಥೆಯ ಚಾರ್ಟರ್ ಮತ್ತು ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಕಾನೂನು, ಅಂತರರಾಷ್ಟ್ರೀಯ ನಿರಾಶ್ರಿತರ ಕಾನೂನು ಮತ್ತು ಅಂತರರಾಷ್ಟ್ರೀಯ ಮಾನವೀಯ ಕಾನೂನು ಸೇರಿದಂತೆ ಅಂತರರಾಷ್ಟ್ರೀಯ ಕಾನೂನಿನ ಅಡಿಯಲ್ಲಿ ಇತರ ಬಾಧ್ಯತೆಗಳಿಗೆ ಅನುಗುಣವಾಗಿ ಎಲ್ಲಾ ದೇಶಗಳು ಎಲ್ಲಾ ರೀತಿಯಲ್ಲಿ ಹೋರಾಡುವ ಅಗತ್ಯವನ್ನು ಅವರು ಪುನರುಚ್ಚರಿಸಿದರು.

# ಕರ್ನಾಟಕದಲ್ಲಿ 92 ಪಾಕ್ ಪ್ರಜೆಗಳು

**ಬೆಂಗಳೂರು, ಏ.27**– ಅಧಿಕೃತವಾಗಿ ರಾಜ್ಯದಲ್ಲಿ 92 ಪಾಕ್ ಪ್ರಜೆಗಳು ವಾಸವಾಗಿರುವುದು ದೃಢಪಟ್ಟಿದ್ದು, ಅವರಲ್ಲಿ ಕೆಲವರು ಇನ್ನೆರಡು ದಿನಗಳಲ್ಲಿ ದೇಶ ತೊರೆಯಬೇಕಾಗಿದೆ. ನಗರದಲ್ಲಿ ನಾಲ್ಕು ಮಂದಿ ಪಾಕ್ ವಲಸಿಗರಿದ್ದು ರಾಜ್ಯದ ಇತರ ಭಾಗಗಳಲ್ಲಿ ಒಟ್ಟು 88 ಮಂದಿ ಇದ್ದಾರೆ. ಇವರಲ್ಲಿ 88 ಮಂದಿ ಲಾಂಗ್ ಟರ್ಮ್ ಹಾಗೂ ಉಳಿದವರು ಶಾರ್ಟ್ ಟರ್ಮ್ ವೀಸಾ ಪಡೆದುಕೊಂಡಿದ್ದಾರೆ.

ಶಾರ್ಟ್‌ಟರ್ಮ್ ವೀಸಾ ಪಡೆದಿರುವ ಪಾಕ್ ವಲಸಿಗರು ದೇಶ ತೊರೆಯಲೇಬೇಕಾಗಿರುವುದರಿಂದ ಬೇರೆ ಬೇರೆ ವೀಸಾದಲ್ಲಿ ರಾಜ್ಯಕ್ಕೆ ಬಂದಿರುವ ಪಾಕ್ ವಲಸಿಗರು ನಾಳೆಯೊಳಗೆ ದೇಶ ತೊರೆಯಬೇಕಾಗಿದೆ. ಇನ್ನು ಮೆಡಿಕಲ್ ವೀಸಾದಲ್ಲಿ ಬಂದಿರುವವರು ಏ.27 ರಂದು ದೇಶ ಬಿಡಬೇಕಾಗಿದೆ. ಒಟ್ಟಾರೆ ರಾಜ್ಯದಲ್ಲಿರುವ 92 ಪಾಕ್ ಪ್ರಜೆಗಳು ಪಾಸ್‌ಪೋರ್ಟ್ ಹೊಂದಿದ್ದು ಅಧಿಕೃತವಾಗಿ ರಾಜ್ಯದಲ್ಲಿ ನೆಲೆಸಿರುವುದು ಪತ್ತೆಯಾಗಿದೆ.

ಪಾಕ್ ವಲಸಿಗರಿಗೆ ಈಗಾಗಲೇ ನೋಟೀಸ್ ಜಾರಿ ಮಾಡಿದ್ದು, ನಿಗದಿತ ಅವಧಿಯೊಳಗೆ ದೇಶ ತೊರೆದು ಹೋಗುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅದೇ ರೀತಿ ನಗರದ ವಿವಿಧ ಭಾಗಗಳಲ್ಲಿರುವ ನಾಲ್ವರು ಪಾಕ್ ವಲಸಿಗರಿಗೂ ನೋಟೀಸ್ ಜಾರಿ ಮಾಡಲಾಗಿದೆ. ಈಗ ಪತ್ತೆಯಾಗಿರುವ 92 ಮಂದಿಯೂ ಅಧಿಕೃತ ವಲಸೆಗಾರರಾಗಿದ್ದಾರೆ. ಆದರೆ, ಅಕ್ರಮವಾಗಿ ರಾಜ್ಯದಲ್ಲಿ ಬೀಡುಬಿಟ್ಟಿರುವ ಅಕ್ರಮ ವಲಸಿಗರ ಸಂಖ್ಯೆ ಇನ್ನು

ದೃಢಪಟ್ಟಿಲ್ಲ, ಮುಂದಿನ ದಿನಗಳಲ್ಲಿ ಅವರನ್ನು ಪತ್ತೆ ಹಚ್ಚಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ. ರಾಜ್ಯದ ಕೆಲವು ಮುಸ್ಲಿಂ ಕುಟುಂಬಗಳು ಹಲವು ವರ್ಷಗಳಿಂದ ಪಾಕಿಸ್ತಾನದ ಕುಟುಂಬಗಳ ಜತೆ ವೈವಾಹಿಕ ಸಂಬಂಧ ಹೊಂದಿವೆ. ಹೀಗಾಗಿ ರಾಜ್ಯದಲ್ಲಿನ 88 ಮಂದಿ ಪಾಕ್ ಪ್ರಜೆಗಳಿಗೆ ವೈವಾಹಿಕ ಸಂಬಂಧ ಇದೆ. ಇವರುಗಳು ಲಾಂಗ್ ಟರ್ಮ್ ವೀಸಾಗಳನ್ನು ಪಡೆದಿದ್ದಾರೆಂದು ತಿಳಿದುಬಂದಿದೆ. ಶೈಕ್ಷಣಿಕ ವೀಸಾ ಮೇಲೆ ಬಂದಿರುವ ಪಾಕ್ ವಿದ್ಯಾರ್ಥಿಯೊಬ್ಬರು ದಾವಣಗೆರೆ ಜಿಲ್ಲೆಯ ಮೆಡಿಕಲ್





ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ನಗರದ ಬಸವನಗುಡಿ, ಮೈಸೂರು, ಮಂಗಳೂರು, ಭಟ್ಕಳ ಸೇರಿದಂತೆ ರಾಜ್ಯದ ವಿವಿಧ ಕಡೆ ಈ 88 ಮಂದಿ ವಾಸವಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ 15 ಪಾಕಿಸ್ತಾನಿಗಳಿದ್ದು, ಅವರಲ್ಲಿ ಕೆಲವು ಪಾಕ್ ಮಹಿಳೆಯರು ಸ್ಥಳೀಯ ಯುವಕರನ್ನು ವಿವಾಹವಾಗಿದ್ದಾರೆ. ಅವರಿಗೆ ಮಕ್ಕಳು ಇರುವುದರಿಂದ ಕೇಂದ್ರ ಸರ್ಕಾರ ಹೊರಡಿಸಿರುವ ಆದೇಶ ಇಲ್ಲಿನ ಪಾಕ್ ಪ್ರಜೆಗಳಿಗೆ ಅನ್ವಯವಾಗುವುದಿಲ್ಲ ಎಂದು ಎಸ್‌ಪಿ ಎಂ.ನಾರಾಯಣ ತಿಳಿಸಿದ್ದಾರೆ. ಕಾರಣವೇನು? ಮಿನಿ ಸ್ವಿಜರ್‌ಲ್ಯಾಂಡ್ ಖ್ಯಾತಿಯ ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು 26 ಮಂದಿ ಅಮಾಯಕ ಹಿಂದೂ ಪ್ರವಾಸಿಗರನ್ನು ಗುಂಡಿಟ್ಟು ಕೊಂದ ಘಟನೆಯ ನಂತರ ನೆರೆಯ ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ ಕೆಲ ನಿಬರ್ಂಧಗಳನ್ನು ವಿಧಿಸಿದೆ. ಅದರಲ್ಲಿ ದೇಶದಲ್ಲಿ ನೆಲೆಸಿರುವ ಎಲ್ಲ ರೀತಿಯ ಪಾಕ್ ಪ್ರಜೆಗಳೂ ಕೂಡಲೇ ದೇಶ ಬಿಟ್ಟು ಹೋಗುವಂತೆ ಸೂಚನೆ ನೀಡಲಾಗಿದೆ.

ಅದೇ ರೀತಿ ದೇಶದ ಎಲ್ಲಾ ರಾಜ್ಯಗಳು ಕೇಂದ್ರ ಸರ್ಕಾರದ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಆದೇಶೀಸಿರುವುದರಿಂದ ಆಯಾ ರಾಜ್ಯಗಳಲ್ಲಿ ನೆಲೆಸಿರುವ ಪಾಕ್ ಪ್ರಜೆಗಳಿಗೆ ದೇಶ ತೊರೆಯುವಂತೆ ನೋಟೀಸ್ ನೀಡಲಾಗುತ್ತಿದೆ.

# ನ್ಯಾಯಾಧೀಶರನ್ನೆ ಬಂಧಿಸಿದ ಟ್ರಂಪ್ ಆಡಳಿತ

**ಮಿಲ್ವಾಕೀ,ಏ.27**– ಅಮೆರಿಕ 'ದಲ್ಲೂ ನ್ಯಾಯಾಂಗ ಮತ್ತು ಕಾರ್ಯಾಂಗದ ನಡುವಿನ ಶೀತಲ ಸಮರ ಮುಂದುವ ರೆದಿದೆ.ವಲಸೆ ನೀತಿ ಸೇರಿ ನ್ಯಾ ಯಾಂಗದ ಕೆಲ ಆದೇಶಗ ಳಿಂದ ಕುಪಿತಗೊಂಡಿರುವ ಟ್ರಂಪ್ ಸರ್ಕಾರದ ಅಧಿಕಾರಿ ಗಳು ಅಮೆರಿಕದ ನ್ಯಾಯಾಧೀ ಶರೊಬ್ಬರನ್ನು ಬಂಧಿಸಿ ಸಂಕಷ್ಟ ವ್ಯೆಮೇಲೆ ಎಳೆದುಕೊಂ ಡಿದ್ದಾರೆ. ವಲಸೆ ಅಧಿಕಾರಿ ಗಳಿಂದ ತಪ್ಪಿಸಿಕೊಳ್ಳಲು ವ್ಯಕ್ತಿಂ ಯೊಬ್ಬರಿಗೆ ಸಹಾಯ ಮಾಡಿದ ಆರೋಪದಲ್ಲಿ ಮಿಲ್ವಾಕೀ ನ್ಯಾಯಾಧೀಶರೊಬ್ಬರನ್ನು ಎಫ್‌ಬಿಐ ಬಂಧಿಸಿದೆ ಎಂದು ವರದಿಯಾಗಿದೆ.

ವಲಸೆ ಅಧಿಕಾರಿಗಳು ಆತನನ್ನು ಬಂಧಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ತಿಳಿದ ನಂತರ ಮಿಲ್ವಾಕೀ ಕೌಂಟಿ ಸರ್ಕ್ಯೂ ಟ್ ನ್ಯಾಯಾಲಯದ



ನ್ಯಾಯಾಧೀಶ ಹನ್ನಾ ಡುಗಾನ್ ಅವರನ್ನು ವಕೀಲರು ನ್ಯಾಯಾಧೀಶರ ಬಾಗಿಲಿನ ಮೂಲಕ ತನ್ನ ನ್ಯಾಯಾಲಯದ ಕೋಣೆಯಿಂದ ಹೊರಗೆ ಕರೆದೊಯ್ದಿದ್ದಾರೆ ಎಂದು ಆರೋಪಿಸಲಾಗಿದೆ.

ಎಫ್‌ಬಿಐ ಏಜೆಂಟರು ಅವರನ್ನು ಕಾಲ್ನಡಿಗೆಯಲ್ಲಿ ಬೆನ್ನಟ್ಟಿದ ನಂತರ ಆ ವ್ಯಕ್ತಿಯನ್ನು ನ್ಯಾಯಾಲಯದ ಹೊರಗೆ ವಶಕ್ಕೆ ತೆಗೆದುಕೊಂಡಿದ್ದಾರೆ.ನ್ಯಾಯಾಧೀಶರ ಬಂಧನವು ಫೆಡರಲ್ ಅಧಿಕಾರಿಗಳು ಮತ್ತು ರಾಜ್ಯ ಮತ್ತು ಸ್ಥಳೀಯ ಅಧಿಕಾರಿಗಳ ನಡುವಿನ ಉದ್ವಿಗ್ನತೆಯನ್ನು ನಾಟಕೀಯವಾಗಿ ಹೆಚ್ಚಿಸಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಡಳಿತವು ಅವರ ವಲಸೆ ಜಾರಿ ಆದ್ಯತೆಗಳಲ್ಲಿ ಹಸ್ತಕ್ಷೇಪ ಮಾಡುತ್ತಿದೆ ಎಂದು ಆರೋಪಿಸಿದೆ. ಗಡಿಪಾರು ಮತ್ತು ಇತರ ವಿಷಯಗಳ ಬಗ್ಗೆ ಅಧ್ಯಕ್ಷರ ಕಾರ್ಯನಿರ್ವಾಹಕ ಕ್ರಮಗಳ ಬಗ್ಗೆ ಟ್ರಂಪ್ ಆಡಳಿತ ಮತ್ತು ಫೆಡರಲ್ ನ್ಯಾಯಾಂಗದ ನಡುವೆ ಹೆಚ್ಚುತ್ತಿರುವ ಯುದ್ಧದ ಮಧ್ಯೆ ಇಂತಹ ಘಟನೆ ನಡೆದಿರುವುದು ಘರ್ಷಣೆ ಹೆಚ್ಚಲು ಕಾರಣವಾಗಬಹುದಾಗಿದೆ.

# ಬಾಲಕರಿಬ್ಬರು ನೀರು ಪಾಲು

**ಚಾಮರಾಜನಗರ,ಏ.27:**– ಕೆರೆಯಲ್ಲಿ ಈಜಲು ತೆರಳಿದ್ದ ಇಬ್ಬರು ಬಾಲಕರು ಮುಳುಗಿ ಸಾವನ್ನಪ್ಪಿದ ಘಟನೆ ಜಿಲ್ಲೆಯ ಯಳಂದೂರು ತಾಲೂಕಿನ ಗುಂಬಳ್ಳಿ ಗ್ರಾಮದಲ್ಲಿ ನಡೆದಿದೆ.

ಗುಂಬಳ್ಳಿ ಗ್ರಾಮದ ಅಭಯಗೌಡ (13), ಕೃಷ್ಣಾಪುರದ ವೃಷಬೇಂದ್ರ (14) ಮೃತ ದುರ್ದೈವಿಗಳು. ಬಾಲಕರಿಬ್ಬರು ಕೆರೆಯಲ್ಲಿ ಈಜಲು ತೆರಳಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ವೃಷಬೇಂದ್ರ ಹಾಗೂ ಅಭಗೌಡನ ಶವವನ್ನು ಮೇಲೆತ್ತಿದ್ದು, ಯಳಂದೂರು ಪೊಲೀಸರು ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.




ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು

# ಏ.29 ರಂದು ಶ್ರೀಚೌಡೇಶ್ವರಿ ಜಾತ್ರಾ ಮಹೋತ್ಸವ

ಯುವ ಮಾರ್ಗ ಸುದ್ದಿ

ಮಾನ್ವಿ: ಪಟ್ಟಣದ ಆರಾಧ್ಯದೈವ ಆದಿಪರಾಶಕ್ತಿ ಜಗನ್ಮಾತೆ ಶ್ರೀ ಚೌಡೇಶ್ವರಿ ದೇವಿಯ 38 ನೇ ವಾರ್ಷಿಕ ಜಾತ್ರಾ ಮಹೋತ್ಸವ ಏ. 29 ರಂದು ಮಂಗಳವಾರ ಜರುಗಲಿದೆ ಎಂದು ತೊಗಟವೀರ ಕ್ಷತ್ರಿಯ ಸಂಘ, ತೊಗಟವೀರ ಕ್ಷತ್ರಿಯ ಯುವಕ ಸಂಘ, ಶ್ರೀಚೌಡೇಶ್ವರಿ ಮಹಿಳಾ ಮಂಡಳಿ ತಿಳಿಯಪಡಿಸಿದ್ದಾರೆ. ಏ. 29 ರಂದು ಮಂಗಳವಾರ ಮುಂಜಾನೆ 6.ಗಂಟೆಗೆ ಶ್ರೀ ಚೌಡೇಶ್ವರಿ ದೇವಿ ಗುಡಿಯಿಂದ ಸಕಲ ಭಕ್ತಾಧಿಗಳು ಸೇರಿ ವಾದ್ಯ ವೈಭವ, ಭಜನೆ, ಕುಂಭಕಳಸ, ನಂದಿಕೋಲ ಸೇವೆಗಳೊಡನೆ ಶ್ರೀದೇವಿಯ ಪಲ್ಲಕ್ಕಿ ಉತ್ಸವವು ಶ್ರೀ ಜಡೇಬಸವೇಶ್ವರ ಗುಡಿಗೆ ತೆರಳಿ ಪೂಜಾ ಸಲ್ಲಿಸಿ ತುಂಗಾಭದ್ರ ನದಿಯಿಂದ ತಂದಿರಿಸಿದ ಪವಿತ್ರ ಜಲ ಆಲಯಕ್ಕೆ ತಂದು ಶ್ರೀ ದೇವಿಗೆ ಅಭಿಷೇಕ ವಿಶೇಷ ಪೂಜೆ ಮಾಡುವುದು.ಮಧ್ಯಾಹ್ನ 1 ಗಂಟೆಗೆ ಸಕಲ ಭಕ್ತಾಧಿಗಳಿಗೆ ಮಹಾಪ್ರಸಾದ. ಸಾಯಂಕಾಲ 4 ಗಂಟೆಯಿಂದ ಶ್ರೀ ಚೌಡೇಶ್ವರಿ ಮಹಿಳಾ ಮಂಡಳಿ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸಾಯಂಕಾಲ 6–30 ಗಂಟೆಯಿಂದ ತೊಗಟವೀರ ಕ್ಷತ್ರಿಯ ಯುವಕ ಸಂಘದವರಿಂದ ಸಹಸ್ರ ದೀಪೋತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು ಏ. 30 ರಂದು ಬುಧವಾರ ವೈಶಾಖ ಶುದ್ಧ ಅಕ್ಷಯ ತೃತೀಯದಂದು ಉದಯ 7.45 ರಿಂದ ಸದಕ್ಷರ ಪರವಾಗಿ ಶ್ರೀ ಸಿದ್ದಯ್ಯಸ್ವಾಮಿಗಳು ಚೀಕಲಪರ್ವಿ ಇವರಿಂದ ಶ್ರೀ ಚೌಡೇಶ್ವರಿ ಅಮ್ಮನವರಿಗೆ ಸಹಸ್ರ ಕುಂಕುಮಾರ್ಚನೆ, ಸಾಯಂಕಾಲ 4 ಗಂಟೆಯಿಂದ ಎಲ್ಲಾ ಭಕ್ತಾಧಿಗಳು ಕೂಡಿ ವಾದ್ಯ ವೈಭವಗಳೊಡನೆ ಭಜನೆ, ಕಳಸ ಕನ್ನಡಿ ನಂದಿಕೋಲು ಸೇವೆಗಳೊಡನೆ ಶ್ರೀ ದೇವಿಯ ಪಲ್ಲಕ್ಕಿ ಉತ್ಸ ವದೊಂದಿಗೆ ಶ್ರೀ ಗಣೇಶ, ಶ್ರೀ ಮಹಾಲಕ್ಷ್ಮಿ, ಶ್ರೀ ಸರಸ್ವತಿ, ಶ್ರೀ ಈಶ್ವರ ದೇವಸ್ಥಾನಕ್ಕೆ ತೆರಳಿ ಪೂಜೆ ನೆರವೇರಿಸಿ ಬರುವುದು. ರಾತ್ರಿ 8 ಗಂಟೆಗೆ ಲಘು ರಥೋತ್ಸವ (ಉಚ್ಚಾಯ) ಪ.ಪೂ. ಶ್ರೀವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಕಲ್ಮಠ ಮಾನ್ವಿ ಇವರ ಅಮೃತ ಹಸ್ತದಿಂದ





ನೇರವೇರಿಸಲಾಗುವುದು. ಮೇ.1 ರಂದು ಗುರುವಾರ ಬೆಳಗುನ ಜಾವ 2.50 ರಿಂದ 3.23 ರವರೆಗಿನ ಶುಭ ಸಮಯದಲ್ಲಿ ಭಜನೆ, ಕಳಸ ಕನ್ನಡಿ, ವಾದ್ಯ, ವೈಭವಗಳೊಂದಿಗೆ ಸಕಲ ವಿಧಿ–ವಿಧಾನಗಳಿಂದ 30ನೇ ವರ್ಷದ ಜ್ಯೋತಿಗಳ ಉತ್ಸವ ಜರುಗುತ್ತದೆ. ಈ ಜಾತ್ರಾ ಮಹೋತ್ಸ ವ ಜ್ಯೋತಿ ಉತ್ಸ ವ ಹಾಗೂ ವಿವಿಧ ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸರ್ವರು ಆಗಮಿಸಿ ಶ್ರೀ ದೇವಿಯ ಕೃಪೆಗೆ ಪಾತ್ರರಾಗಿ ತನ್ನ ಮನು ಧನಾಧಿಗಳಿಂದ ಸೇವೆ ಸಲ್ಲಿಸಿ ಪುನೀತರಾಗಬೇಕೆಂದು ಕೋರಿದ್ದಾರೆ.

ಶಿಥಿಲಾವಸ್ಥೆಯಲ್ಲಿದ್ದ ಶ್ರೀ ಚೌಡೇಶ್ವರಿ ದೇವಿ ಗುಡಿ ತರುವುಗೊಳಿಸಿ ಶಿಲಾ ಕಟ್ಟಡದ ದೇವಾಲಯ ಕಟ್ಟಿಸಲು ದೇಣಿಗೆ ಹಣ ಸಂಗ್ರಹ ಮಾಡಲಾಗುತ್ತಿದೆ ಅಂದಾಜು ಪಟ್ಟಿಯಂತೆ 1.5 ಕೋಟಿ ಸಂಗ್ರಹ ಗುರಿ ಹೊಂದಲಾಗಿದೆ. ಕಾರಣ ಈ ಬೃಹತ್ ಧಾರ್ಮಿಕ ಕಾರ್ಯಕ್ಕೆ ತಾವು ಕೈ ಜೋಡಿಸಿ ದೇಣಿಗೆ ಹಣ ನೀಡಿ ಶ್ರೀ ದೇವಿಯ ಕೃಪೆಗೆ ಪಾತ್ರರಾಗಬೇಕು. ಹೆಚ್ಚಿನ ಮಾಹಿತಿಗಾಗಿ 9845737606,9448825992, 6363233704 ಸಂಖ್ಯೆಗಳಿಗೆ ಸಂಪರ್ಕಿಸುವಂತೆ ತಿಳಿಸಿದ್ದಾರೆ.

# ಕಾಶ್ಮೀರದ ಪಹಲ್ಗಾಮ್ ಹಲ್ಲೆ ಖಂಡಿಸಿ ದೇವದುರ್ಗದಲ್ಲಿ ಪ್ರತಿಭಟನೆ




ಯುವ ಮಾರ್ಗ ಸುದ್ದಿ

**ದೇವದುರ್ಗ.ಏ.27**–ಜಮ್ಮು–ಕಾಶ್ಮೀರದ ಪಹಲ್ಗಾಮ್ ನಲ್ಲಿ ಹಿಂದುಗಳ ಮೇಲೆ ನಡೆದ ಭಯೋತ್ಪಾದಕರ ಹಲ್ಲೆಯನ್ನು ತೀವ್ರವಾಗಿ 2, ದೇವದುರ್ಗದ ಹಿಂದೂ ಸಮಾಜೋತ್ಸ ವದ ವತಿಯಿಂದ ಶುಕ್ರವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು. ಘಟನೆಯ ಕುರಿತು ತಕ್ಷಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ರಾಜ್ಯಪಾಲರಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರರ ಮೂಲಕ ಸಲ್ಲಿಸಲಾಯಿತು. ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಬಿಜೆಪಿ ಮುಖಂಡ ಮತ್ತು ಹಂಪಿ ವಿಶ್ವವಿದ್ಯಾಲಯದ ಮಾಜಿ ಸಿಂಡಿಕೇಟ್ ಸದಸ್ಯ ನಾಗರಾಜ ಅಕ್ಕರಕಿ, ಕಾಶ್ಮೀರದಲ್ಲಿ ನಡೆದ ಈ ಉಗ್ರರ ದಾಳಿಯಿಂದ ವಿಶ್ವದ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆ ಉಂಟಾಗಿದೆ. ಇಂತಹ ಅಮಾನವೀಯ ಕೃತ್ಯಗಳಿಗೆ ಕೇಂದ್ರ ಸರ್ಕಾರವು ಶೀಘ್ರದಲ್ಲೇ ಪ್ರತ್ಯುತ್ತರ ನೀಡಲಿದೆ. ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಕೇಂದ್ರ ಸರ್ಕಾರ ಕಠಿಣ ಕ್ರಮ ಕೈಗೊ ಳ್ಳಬೇಕಾಗಿದೆ, ಎಂದು ಆಗ್ರಹಿಸಿ ದರು.ಈ ಘಟನೆಯಲ್ಲಿ ಪ್ರಾಣ ಕಳೆದುಕೊಂಡ ಕುಟುಂಬಗಳಿಗೆ ಇಡೀ ದೇಶ ಸಾಥ್ ನೀಡುತ್ತಿದೆ. ಉಗ್ರರ ಈ ಹೇಯ ಕೃತ್ಯವನ್ನು ಎಲ್ಲರೂ ಒಗ್ಗಟ್ಟಾಗಿ ಖಂಡಿಸಬೇಕಾಗಿದೆ, ಎಂದು ಅವರು ಹೇಳಿದರು. ಪ್ರತಿಭಟನೆಯಲ್ಲಿ ಪ್ರಕಾಶ ಖೇಣೇದ, ಶರಣಗೌಡ ಕಮತಗಿ, ಮಹಾದೇವಪ್ಪ ರೇವಣಿ, ವೆಂಕಟರಾಯಗೌಡ ಬೆನಕನ್, ರವಿ ದೇಸಾಯಿ, ಸಚಿನ ದೋಟಿಹಾಳ, ಮೌನೇಶ ಪತ್ತಾರ, ಮಲ್ಲಿಕಾರ್ಜುನ ಅಮರಾಪುರ, ಬೂದಯ್ಯ ಸ್ವಾಮಿ, ಪ್ರಮುಖರು ಭಾಗವಹಿಸಿದ್ದರು

# ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗೆ ತರಬೇತಿ

ಯುವ ಮಾರ್ಗ ಸುದ್ದಿ

**ರಾಯಚೂರು,ಏ.27**–ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನರುದ್ಯೋಗಿ ಮಹಿಳೆಯರಿಗಾಗಿ ವೃತ್ತಿ ತರಬೇತಿ ಆಯೋಜಿಸಲಾಗಿದೆ. 8ನೇ ತರಗತಿ ವ್ಯಾಸಂಗ ಮಾಡಿರುವ, 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಗ್ರಾಮೀಣ ಭಾಗದ ಮಹಿಳೆಯರಿಗೆ ಬಿಪಿಎಲ್ ಕಾರ್ಡುದಾರರಿಗೆ ಈ ತರಬೇತಿಯು ಅನ್ವಯಿಸುತ್ತದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಬೆಳಿಗ್ಗೆ 09.30 ಗಂಟೆಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ), ಆಶಾಪೂರು ರಸ್ತೆ, ರಾಯಚೂರು ಈ ವಿಳಾಸದಲ್ಲಿ ಹಾಜರಾಗಬೇಕು. ಕೆಲವೇ ಸೀಟುಗಳು ಲಭ್ಯವಿರುತ್ತವೆ. ಅರ್ಜಿ ಜೊತೆಗೆ ಆಧಾರ್ ಕಾರ್ಡ, ರೇಷನ್ ಕಾರ್ಡ, ಫೋಟೋಸ್, ಬ್ಯಾಂಕ್ ಪಾಸಬುಕ್, ಪ್ಯಾನ್ ಕಾರ್ಡ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮೊ: 8217382735 & 9742470999 ಸಂಪರ್ಕಿಸಬಹುದು ಎಂದು ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 9 ಜನ ಪಾಕ್ ನಾಗರಿಕರು 6 ಜನರಿಗೆ ದೇಶ ತೊರೆಯಲು ಸೂಚನೆ



**ಕಲಬುರಗಿ,ಏ.27:** ನಗರದಲ್ಲಿ 9 ಜನ ಪಾಕಿಸ್ತಾನದ ನಾಗರಿಕರು ಇದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

7 ಜನ ಪ್ರವಾಸಿ ವೀಸಾ ಪಡೆದು ಕಳೆದ 20 ವರ್ಷದಿಂದ ಇಲ್ಲಿಯೇ ನೆಲೆಸಿದ್ದಾರೆ. ಇವರಲ್ಲಿ ಒಬ್ಬ ಮಹಿಳೆ ಅನುಮತಿ ಪಡೆದು ವಿದೇಶಕ್ಕೆ ತೆರಳಿದ್ದಾಳೆ. ಉಳಿದ 6 ಜನರಲ್ಲಿ 3 ಜನ ಪುರುಷರು 3 ಜನ ಮಹಿಳೆಯರು ಇದ್ದಾರೆ. ಈ 6 ಜನರಿಗೆ ದೇಶ ತೊರೆಯುವಂತೆ ನೋಟೀಸ್ ನೀಡಲಾಗಿದೆ ಎಂದರು.

ಇಬ್ಬರು ಸುದೀರ್ಘ ಅವಧಿಯ ವೀಸಾದಲ್ಲಿ ಇದ್ದಾರೆ.ಅವರು ಕೇಂದ್ರ ಸರಕಾರ ಹೊರಡಿಸಿದ ಮಾರ್ಗ ಸೂಚಿಗಳ ಅಡಿ ಬರುವದಿಲ್ಲ ಎಂದು ತಿಳಿಸಿದರು.

# ಮಾನಸಿಕ ಖಿನ್ನತೆ: ಗುಂಡಿಕ್ಕಿಕೊಂಡು ಪಾಲಿಕೆ ಮಾಜಿ ಸದಸ್ಯನ ಪುತ್ರ ಆತ್ಮಹತ್ಯೆ



ಅಶ್ನನ್ ಪ್ರಕಾಶ ಮಿರ್ಜಿ (21) ಮೃತಪಟ್ಟ ಯುವಕ.

**ವಿಜಯಪುರ:ಏ.27:** ಮಾನಸಿಕ ಖಿನ್ನತೆ ಹಿನ್ನೆಲೆ, ಪಾಲಿಕೆ ಮಾಜಿ ಸದಸ್ಯನ ಪುತ್ರನೊಬ್ಬ ತಲೆಗೆ ಪಿಸ್ತೂಲ್ ನಿಂದ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಶಿಕಾರಖಾನೆ ಬಡಾವಣೆಯಲ್ಲಿ ಶುಕ್ರವಾರ ನಡೆದಿದೆ.

ಅಶ್ನನ್ ಮಿರ್ಜಿ ಈತ ಇತ್ತೀಚೆಗೆ ಬಿಸಿಎ ಪದವಿ ಮುಗಿಸಿ ಮನೆಯಲ್ಲಿದ್ದು, ಕಳೆದ ಎರಡು ವರ್ಷಗಳಿಂದ ಮಾನಸಿಕ ಖಿನ್ನತೆಗೆ ಒಳಗಾಗಿದ್ದ. ಏಕಾಏಕಿ ಪಿಸ್ತೂಲ್ ನಿಂದ ತಲೆಗೆ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಅಶ್ನನ್‌ನ ತಂದೆ, ಪಾಲಿಕೆ ಮಾಜಿ ಸದಸ್ಯ ಪ್ರಕಾಶ ಮಿರ್ಜಿ, ಇಲ್ಲಿನ ಮಹಾನಗರ ಪಾಲಿಕೆ 35 ಸದಸ್ಯರು ಆಸ್ತಿ ಘೋಷಣೆ ಮಾಡದ ಹಿನ್ನೆಲೆ, ಅವರ ವಿರುದ್ಧ ಕಲಬುರಗಿ ಹೈಕೋರ್ಟ್ ಗೆ ತೆರಳಿದ್ದ ವೇಳೆ, ಪಾಲಿಕೆ ಸದಸ್ಯರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಸೂಚಿಸಿದ ಹಿನ್ನೆಲೆ, ಪಾಲಿಕೆ ಸದಸ್ಯರನ್ನು ಇತ್ತೀಚೆಗೆ ಸರ್ಕಾರ ಅನರ್ಹಗೊಳಿಸಿತ್ತು. ಇದರಿಂದ ಕೆಲವರು, ಪ್ರಕಾಶ ಮಿರ್ಜಿಗೆ ಜೀವ ಬೆದರಿಕೆ ಹಾಕಿದ್ದರು. ಹೀಗಾಗಿ ಪ್ರಕಾಶ ಮಿರ್ಜಿ ಪಿಸ್ತೂಲ್ ಲೋಡ್ ಮಾಡಿ ಇಟ್ಟಿರುತ್ತಿದ್ದರು ಎನ್ನಲಾಗಿದ್ದು, ಅದೇ ಪಿಸ್ತೂಲ್ ನಿಂದ ಪುತ್ರ ತಲೆಗೆ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಡಿವೈಎಸ್ ಪಿ ಬಸವರಾಜ ಯಲಿಗಾರ, ಸಿಪಿಐ ಮಲ್ಲಯ್ಯ ಮಠಪತಿ ಸೇರಿ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಎಪಿಎಂಸಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಕಾಂಗ್ರೆಸ್ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ



**ಬೆಂಗಳೂರು,ಏ.27:**ಡಿಜಿಟಲ್ ಮೀಟರ್ ಹೆಸರಲ್ಲಿ ಬಡವರನ್ನು ಹಿಂಡುತ್ತಿದ್ದ ಕಾಂಗ್ರೆಸ್ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹೇಳಿದರು.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು,ಸ್ಮಾರ್ಟ್ ವಿದ್ಯುತ್ ಮೀಟರ್ ಅಳವಡಿಕೆ ಕಡ್ಡಾಯಗೊಳಿಸಿ ಬರೋಬ್ಬರಿ 10 ಸಾವಿರ ರೂ. ನಿಗದಿಪಡಿಸಿದ್ದ ಸರ್ಕಾರದ ನಿರ್ಧಾರಕ್ಕೆ ನ್ಯಾಯಾಲಯ ಛೀಮಾರಿ ಹಾಕಿ ತಡೆಯಾಜ್ಞೆ ನೀಡಿದೆ ಎಂದಿದ್ದಾರೆ.

ಸ್ಮಾರ್ಟ್ ಮೀಟರ್ ಬೆಲೆ 2 ಸಾವಿರ ರೂ ಇದ್ದುದ್ದನ್ನು 10 ಸಾವಿರಕ್ಕೆ ಏರಿಸಿ ಜನಸಾಮಾನ್ಯರನ್ನು ಸುಲಿಗೆ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಉಚಿತ ವಿದ್ಯುತ್ ಕೊಡಿ ಎಂದು ಯಾರಾದರೂ ಕೇಳಿದ್ದರಾ. ಬಡವರ ಸ್ಥಿತಿ ಏನಾಗಬೇಕು ಎಂದು ಉಚ್ಚ ನ್ಯಾಯಾಲಯ ಮಂಗಳಾರತಿ ಎತ್ತಿದೆ. ಇನ್ನಾದರೂ ಈ ಸರ್ಕಾರ ಜನಪೀಡಕ ನಿರ್ಧಾರಗಳನ್ನು ಕೈಬಿಟ್ಟು ಜನಪರ ಕಾರ್ಯಕ್ರಮಗಳಿಗೆ ಮುಂದಾಗಲಿ ಎಂದು ವಿಜಯೇಂದ್ರ ಆಗ್ರಹಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿಯ ಮೂಲಕ 200 ಯೂನಿಟ್‌ವರೆಗೆ ಎಲ್ಲರಿಗೂ ಉಚಿತ ವಿದ್ಯುತ್ ನೀಡುತ್ತೇವೆ ಎಂದು ಅವಾಸ್ತವಿಕ ಗ್ಯಾರಂಟಿ ನೀಡಿ ಅದಕ್ಕೂ ಹಲವು ಷರತ್ತುಗಳನ್ನು ವಿಧಿಸಲಾಗಿತ್ತು. ಆದರೆ ಗ್ಯಾರಂಟಿ ಅನುಷ್ಠಾನದ ಬಳಿಕ ಇಂಧನ ಇಲಾಖೆ ದಿವಾಳಿ ಹಂಚಿಗೆ ಸಾಗಿದ ಬೆನ್ನಲ್ಲೆ ಗ್ರಾಹಕರ ಮೇಲೆ ಹೊರೆ ಹಾಕಿ ದಿನದಿಂದ ದಿನಕ್ಕೆ ವಿದ್ಯುತ್ ದರ ಏರಿಸುತ್ತಲೇ ಇದ್ದ ಈ ಸರ್ಕಾರ ಇದೀಗ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯಗೊಳಿಸಿ ಬರೋಬ್ಬರಿ 10 ಸಾವಿರ ರೂ. ನಿಗದಿಪಡಿಸಿದ ನಿರ್ಧಾರಕ್ಕೆ ನ್ಯಾಯಾಲಯ ಛೀಮಾರಿ ಹಾಕಿ ತಡೆಯಾಜ್ಞೆ ನೀಡಿದೆ ಎಂದು ವಿಜಯೇಂದ್ರ ಹೇಳಿದ್ದಾರೆ.


# ಸಿಡಿಲಿಗೆ ಜೋಡೆತ್ತು ಬಲಿ



ಔರಾದ್(ಮಮದಾಪೂರ): ಏ.26:ಸಿಡಿಲು ಬಡಿದ ಪರಿಣಾಮ ತಾಲೂಕಿನ ಮಮದಾಪೂರ ಗ್ರಾಮದಲ್ಲಿ ಎರಡು ಎತ್ತುಗಳು ಬಲಿಯಾದ ಘಟನೆ ಶುಕ್ರವಾರ ಮಧ್ಯಾಹ್ನ ನಡೆದಿದೆ.

ರೈತ ಹಾವಯ್ಯ ಸ್ವಾಮಿ ಎಂಬವರಿಗೆ ಸೇರಿದ ಎತ್ತುಗಳು ಮೃತಪಟ್ಟಿವೆ. 1.20 ಲಕ್ಷ ರೂ. ಬೆಲೆ ಇರಬಹುದು ಎಂದು ಅಂದಾಜಿಸಲಾಗಿದೆ. ಘಟನಾ ಸ್ಥಳಕ್ಕೆ ಕಂದಾಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಈ ಕುರಿತಂತೆ ಔರಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಲಕ್ಷಾಂತರ ರೂಪಾಯಿ ಬೆಲೆ ಬಾಳುವ ಎತ್ತುಗಳನ್ನು ಕಳೆದುಕೊಂಡ ರೈತ ಸಂಕಷ್ಟಕ್ಕೆ ಸಿಲುಕಿದ್ದು ಕೂಡಲೇ ಸೂಕ್ತ ಪರಿಹಾರಕ್ಕೆ ಗ್ರಾಮದ ಮುಖಂಡರು ಆಗ್ರಹಿಸಿದ್ದಾರೆ.

# ತಟಸ್ಥ–ಪಾರದರ್ಶಕ ತನಿಖೆಗೂ ಸಿದ್ಧ : ಪಾಕ್ ಪ್ರಧಾನಿ ಷರೀಫ್



**ಇಸ್ಲಾಮಬಾದ್,ಏ.27**– ಭಾರತದೊಂದಿಗೆ ಹೆಚ್ಚುತ್ತಿರುವ ಉದ್ವಿಗ್ನತೆಯ ಬಗ್ಗೆ ಮೌನ ಮುರಿದಿರುವ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರು, ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ತಟಸ್ಥ ಮತ್ತು ಪಾರದರ್ಶಕ ತನಿಖೆಗೆ ಸಿದ್ಧವಾಗಿದದೇವೆ. ಜೊತೆಗೆ ದೇಶವು ಯಾವುದೇ ದುಸ್ಸಾಹಸಕ್ಕೆ ಸಿದ್ಧವಾಗಿದೆ ಎಂದು ಹೇಳಿದ್ದಾರೆ.

ಪಾಕಿಸ್ತಾನವು ಯಾವುದೇ ತಟಸ್ಥ, ಪಾರದರ್ಶಕ ತನಿಖೆಯಲ್ಲಿ ಭಾಗವಹಿಸಲು ಮುಕ್ತವಾಗಿದೆ. ಶಾಂತಿ ನಮ್ಮ ಆದ್ಯತೆಯಾಗಿದೆ. ನಮ್ಮ ಸಮಗ್ರತೆ ಮತ್ತು ಭದ್ರತೆಯಲ್ಲಿ ನಾವು ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಪುನರುಚ್ಚರಿಸಿದ್ದಾರೆ. ಇತ್ತೀಚೆಗೆ ಇತರ ಪಾಕಿಸ್ತಾನಿ ನಾಯಕರು ಮತ್ತು ಅವರ ಮಂತ್ರಿಗಳಿಂದ ಕಂಡುಬರುವ ಮಾತುಗಳಿಂದ ಭಾರತ ಕೆಂಡಮಂಡಲವಾಗಿರುವ ಬೆನ್ನಲ್ಲೇ, ಷರೀಫ್ ಅವರ ಹೇಳಿಕೆ ಉಭಯ ರಾಷ್ಟಗಳ ನಡುವೆ ಪರಿಸ್ಥಿತಿಯನ್ನು ತಿಳಿಗೊಸುವುದಾಗಿದೆ ಎಂದು ವ್ಯಾಖ್ಯಾನಿಸಲಾಗಿದೆ. ಪ್ರದೇಶದಲ್ಲಿ ಬಿಕ್ಕಟ್ಟು ಸೃಷ್ಟಿಸಲು ಭಾರತವು ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿದೆ.

ಇತ್ತೀಚಿನ ವರ್ಷಗಳಲ್ಲಿ ಕಾಶ್ಮೀರದಲ್ಲಿ ನಡೆದ ಅತ್ಯಂತ ಭೀಕರ ಭಯೋತ್ಪಾದಕ ದಾಳಿಗೆ ಪಹಲ್ಗಾಮ್ ಸಾಕ್ಷಿಯಾಗಿದೆ. ನಂತರ ಲಷ್ಕರ್–ಎ–ತೊಯ್ದ ಭಯೋತ್ಪಾದಕರು 26 ಪ್ರವಾಸಿಗರನ್ನು ಮಿನಿ ಸ್ವಿಟ್ಸರ್ಲೆಂಡ್ ಎಂದು ಕರೆಯಲ್ಪಡುವ ಬೈಸರನ್ ಕಣಿವೆಯಲ್ಲಿ ಕೊಂದು ಹಾಕಿದ್ದರು. ಭಯೋತ್ಪಾದನಾ ದಾಳಿಗೆ ಪಾಕಿಸ್ತಾನವನ್ನು ಪರೋಕ್ಷವಾಗಿ ಹೊಣೆಗಾರರನ್ನಾಗಿ ಮಾಡಿದ ಭಾರತ. ಕೆಲವು ಕಠಿಣ ಕ್ರಮಗಳ ಮೂಲಕ ಪ್ರತ್ಯುತ್ತರ ನೀಡಿದೆ. ರಾಜತಾಂತ್ರಿಕ ಸಂಬಂಧಗಳನ್ನು ತಗ್ಗಿಸಿ, ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿದ್ದಲ್ಲದೆ, ಭಾರತವು ಪಾಕಿಸ್ತಾನಿಗಳಿಗೆ ವೀಸಾ ನೀಡುವುದನ್ನು ರದ್ದುಗೊಳಿಸಿದೆ ಮತ್ತು ವಾಘಾ–ಅಟ್ಟಾರಿ ಗಡಿಯನ್ನು ಮುಚ್ಚಿದೆ. ಇದಕ್ಕೆ ಪ್ರತೀಕಾರ ಎಂಬಂತೆ ಪಾಕಿಸ್ತಾನವು ಭಾರತೀಯ ಒಡೆತನದ ಮತ್ತು ನಿರ್ವಹಿಸುವ ವಿಮಾನಯಾನ ಸಂಸ್ಥೆಗಳಿಗೆ ತನ್ನ ವಾಯುಪ್ರದೇಶವನ್ನು ಮುಚ್ಚಿದೆ.

ಸಿಂಧೂ ಒಪ್ಪಂದದ ಅಮಾನತಿನಲ್ಲಿ ಪಾಕಿಸ್ತಾನಕ್ಕೆ ಸೇರಿದ ನೀರನ್ನು ಕಡಿಮೆ ಮಾಡುವ ಅಥವಾ ತಿರುಗಿಸುವ ಯಾವುದೇ ಪ್ರಯತ್ನಕ್ಕೆ ಪೂರ್ಣ ಬಲದಿಂದ ಪ್ರತಿಕ್ರಿಯಿಸಲಾಗುವುದು ಎಂದು ಷರೀಫ್ ಎಚ್ಚರಿಸಿದ್ದಾರೆ.ಸಿಂಧೂ ನದಿಗಳು ಪಾಕಿಸ್ತಾನದ ಜೀವನಾಡಿ ಮತ್ತು ಅದರ 80% ಕೃಷಿ ಭೂಮಿಗೆ ನೀರನ್ನು ಒದಗಿಸುತ್ತವೆ. ಇದಲ್ಲದೆ, ಅದರ ಜಲಶಕ್ತಿಯ ಮೂರನೇ ಒಂದು ಭಾಗವು ಸಿಂಧೂ ಜಲಾನಯನದ ನೀರನ್ನು ಅವಲಂಬಿಸಿರುತ್ತದೆ.ಯಾರೂ ಯಾವುದೇ ರೀತಿಯ ಸುಳ್ಳು ನೆಪದಲ್ಲಿ ಉಳಿಯಬಾರದು.

ನಮ್ಮ ಸಶಸ್ತ್ರ ಪಡೆಗಳು ಯಾವುದೇ ದುಷ್ಕೃತ್ಯದ ವಿರುದ್ಧ ದೇಶ ಮತ್ತು ಅದರ ಸಾರ್ವಭೌಮತೆ ಮತ್ತು ಸಮಗ್ರತೆಯನ್ನು ರಕ್ಷಿಸಲು ಸಂಪೂರ್ಣವಾಗಿ ಸಮರ್ಥವಾಗಿವೆ ಮತ್ತು ಸಿದ್ಧವಾಗಿವೆ, ಫೆಬ್ರವರಿ 2019 ರಲ್ಲಿ ಭಾರತಕ್ಕೆ ಅದರ ಪ್ರಕ್ಷುಬ್ಧ ಆಕ್ರಮಣದಲ್ಲಿ ಅದರ ಅಳತೆ ಮತ್ತು ದೃಢವಾದ ಪ್ರತಿಕ್ರಿಯೆಯಿಂದ ಸ್ಪಷ್ಟವಾಗಿ ತೋರಿಸಲಾಗಿದೆ ಎಂದು ಪಾಕಿಸ್ತಾನಿ ಪ್ರಧಾನಿ ಹೇಳಿದರು.

ಫೆಬ್ರವರಿ 2019 ರಲ್ಲಿ, 44 ಸೈನಿಕರನ್ನು ಬಲಿತೆಗೆದುಕೊಂಡ ಪುಲ್ವಾಮಾ ದಾಳಿಯ ನಂತರ, ಭಾರತವು ಬಾಲಾಕೋಟ್‌ನಲ್ಲಿ ಭಯೋತ್ಪಾದಕ ಲಾಂಚ್ ಪ್ಯಾಡ್ ಗಳನ್ನು ಗುರಿಯಾಗಿಸಿಕೊಂಡು ವೈಮಾನಿಕ ದಾಳಿ ನಡೆಸಿತ್ತು. ಪಾಕಿಸ್ತಾನದ ವಾಯುಪಡೆಯು ಜಮ್ಮುವಿನ ರಜೆರಿ ಸೆಕ್ಟರಲ್ಲಿ ದಾಳಿ ಯೊಂದಿಗೆ ಪ್ರತೀಕಾರ ತೀರಿಸಿಕೊ ಂಡಿತು. ನಂತರದ ವೈಮಾನಿಕ ಯುದ್ಧದಲ್ಲಿ, ಭಾರತವು ಪಾಕಿಸ್ತಾನದ ಈ –16 ಯುದ್ಧ ವಿಮಾನವನ್ನು ಹೊಡೆದುರುಳಿಸಿತ್ತು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**